# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 137
ಬೆಲೆ ರೂ : 2.00
ರಾಯಚೂರು
ಪುಟ: 4

DAIRYADA DAARI
RNI NO: KNKAN/25/A2795 ಗುರುವಾರ: 07-05-2026


## ಬಿಜೆಪಿಯ ಬಹುತೇಕ ಸಂಸದರು ವೋಟ್ ಚೋರಿ ಮೂಲಕ ಗೆದ್ದಿದ್ದಾರೆ : ರಾಹುಲ್ ಗಾಂಧಿ

**ನವದೆಹಲಿ, ಮೇ 6–** ಲೋಕಸಭೆಯಲ್ಲಿ ಇರುವ ಬಿಜೆಪಿಯ ಭಾಗಶಃ ಸಂಸದರು ವೋಟ್ ಚೋರಿ ಮೂಲಕ ತಮ್ಮ ಸ್ಥಾನವನ್ನು ಪಡೆದುಕೊಂಡಿದ್ದಾರೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ ಮತ್ತು ಆ ಪಕ್ಷದ ಭಾಷೆಯಲ್ಲಿ ಅವರನ್ನು ಘುಸ್ಪೈಥಿಯಾ ಎಂದು ಹಣೆಪಟ್ಟಿ ಕಟ್ಟಬೇಕೇ ಎಂದು ಕೇಳಿದ್ದಾರೆ.

ನ್ಯಾಯಯುತ ಚುನಾವಣೆಗಳು ನಡೆದರೆ ಇಂದು ಲೋಕಸಭೆಯಲ್ಲಿ ಬಿಜೆಪಿ 140 ಸ್ಥಾನಗಳನ್ನು ಗೆಲ್ಲಲು ಸಾಧ್ಯವಿಲ್ಲ ಎಂದು ಗಾಂಧಿ ಹೇಳಿದ್ದಾರೆ.ಮತ ಕದಿಯುವ ಮೂಲಕ, ಕೆಲವೊಮ್ಮೆ ವೈಯಕ್ತಿಕ ಸ್ಥಾನಗಳನ್ನು ಕದಿಯಲಾಗುತ್ತದೆ, ಮತ್ತು ಕೆಲವೊಮ್ಮೆ, ಇಡೀ ಸರ್ಕಾರವನ್ನು ಕದಿಯಲಾಗುತ್ತದೆ. ಲೋಕಸಭೆಯಲ್ಲಿರುವ 240 ಬಿಜೆಪಿ ಸಂಸದರಲ್ಲಿ, ಸರಿಸುಮಾರು ಪ್ರತಿ ಆರನೇ ಸಂಸದರು ಮತ ಚೋರಿಯ ಮೂಲಕ ಸ್ಥಾನವನ್ನು ಪಡೆದುಕೊಂಡಿದ್ದಾರೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಅವರನ್ನು ಗುರುತಿಸುವುದು ಕಷ್ಟವೇನಲ್ಲ ನಾವು, ಬಿಜೆಪಿಯ



ಸ್ವಂತ ಭಾಷೆಯಲ್ಲಿ, ಅವರನ್ನು ಘುಸ್ಪೈಥಿಯಾ ಎಂದು ಹಣೆಪಟ್ಟಿ ಕಟ್ಟಬೇಕೇ? ಮತ್ತು ಹರಿಯಾಣದ ಬಗ್ಗೆ ಏನು? ಅಲ್ಲಿ, ಇಡೀ ಸರ್ಕಾರವೇ ಘುಸ್ಪೈಥಿಯಾ.
ಅವರು ತಮ್ಮ ಜೇಬಿನಲ್ಲಿ ಇಟ್ಟುಕೊಳ್ಳುವ ಸಂಸ್ಥೆಗಳು ಮತದಾರರ ಪಟ್ಟಿಗಳು ಮತ್ತು ಚುನಾವಣಾ ಪ್ರಕ್ರಿಯೆಯನ್ನು ವಿರೂಪಗೊಳಿಸಲು ಅವರು ಕುಶಲತೆಯಿಂದ ನಿರ್ವಹಿಸುವ ಸಂಸ್ಥೆಗಳು ಸ್ವತಃ ರಿಮೋಟ್-ನಿಯಂತ್ರಿತವಾಗಿವೆ ಎಂದು ಗಾಂಧಿಯವರು ಬಿಜೆಪಿಯ ಮೇಲೆ ಕಟುವಾದ ದಾಳಿಯಲ್ಲಿ ಹೇಳಿದರು. ಬಂಗಾಳ ಮತ್ತು ಅಸ್ಸಾಂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ವಿಜಯವನ್ನು ಜನಾದೇಶದ ಕಳ್ಳತನ ಮತ್ತು ಭಾರತೀಯ ಪ್ರಜಾಪ್ರಭುತ್ವವನ್ನು ನಾಶಮಾಡುವ ಕೇಸರಿ ಪಕ್ಷದ ಧ್ಯೇಯದಲ್ಲಿ ಒಂದು ದೊಡ್ಡ ಹೆಜ್ಜೆ ಎಂದು ಕರೆದರು.ಮತದಾನದಲ್ಲಿ ಬಿಜೆಪಿಯಿಂದ ಸೋತಿರುವ ಟಿಎಂಸಿಯನ್ನು ಬೆಂಬಲಿಸಲು ಗಾಂಧಿಯವರು ಬಂದಿದ್ದಾರೆ ಮತ್ತು ಮಮತಾ ಬ್ಯಾನರ್ಜಿಯವರ ಪಕ್ಷದ ಸೋಲಿನಿಂದ ಸಂತೋಷಪಡುವವರು ಕ್ಷುಲ್ಲಕ ರಾಜಕೀಯವನ್ನು ಬದಿಗಿಡುವಂತೆ ಒತ್ತಾಯಿಸಿದರು.

ಕಾಂಗ್ರೆಸ್‌ನಲ್ಲಿ ಕೆಲವರು ಮತ್ತು ಇತರರು ಟಿಎಂಸಿಯ ಸೋಲಿನ ಬಗ್ಗೆ ಸಂತೋಷಪಡುತ್ತಿದ್ದಾರೆ. ಅವರು ಇದನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು ಅಸ್ಸಾಂ ಮತ್ತು ಬಂಗಾಳದ ಜನಾದೇಶದ ಕಳ್ಳತನವು ಭಾರತೀಯ ಪ್ರಜಾಪ್ರಭುತ್ವವನ್ನು ನಾಶಮಾಡುವ ತನ್ನ ಧ್ಯೇಯದಲ್ಲಿ ಬಿಜೆಪಿಯ ದೊಡ್ಡ ಹೆಜ್ಜೆಯಾಗಿದೆ ಎಂದು ಗಾಂಧಿಯವರು ಆರೋಪಿಸಿದ್ದಾರೆ.

## ಅಕ್ಷರ ಕ್ರಾಂತಿಯಿಂದ ಮಾತ್ರ ಬದುಕು ಬದಲಾಗಲು ಸಾಧ್ಯ : ರಮೇಶ್ ಭಂಡಾರಿ



ಧೈರ್ಯದ ದಾರಿ

**ಸಿರವಾರ:** "ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಅಕ್ಷರ ಕ್ರಾಂತಿಯಾದಾಗ ಮಾತ್ರ ಬದುಕು ಬದಲಾಗಲು ಸಾಧ್ಯ," ಎಂದು ಮುಖಂಡರಾದ ರಮೇಶ್ ಭಂಡಾರಿ ಅವರು ಅಭಿಪ್ರಾಯಪಟ್ಟರು. ಸಿರವಾರ ತಾಲೂಕಿನ ಮಲ್ಲಟ್ ಗ್ರಾಮದ ಪ್ರತಿಭಾವಂತ ವಿದ್ಯಾರ್ಥಿ ಮಲ್ಲಿಕಾರ್ಜುನ ಸ್ವಾಮಿ ಅವರು ಎಸ್.ಎಸ್.ಎಲ್.ಸಿ (10ನೇ ತರಗತಿ) ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ಸ್ಥಾನ ಪಡೆದ ಹಿನ್ನೆಲೆಯಲ್ಲಿ, ಅವರನ್ನು ಅಭಿನಂದಿಸಿ ಅವರು ಮಾತನಾಡಿದರು.

ಸಾಧನೆಗೆ ಬಡತನ ಅಡ್ಡಿಯಲ್ಲ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ರಮೇಶ್ ಭಂಡಾರಿಯವರು, "ಮಲ್ಲಿಕಾರ್ಜುನ ಸ್ವಾಮಿ ರಾಜ್ಯಮಟ್ಟದಲ್ಲಿ ಸಾಧನೆ ಮಾಡಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ. ಹತ್ತನೇ ತರಗತಿ ಎಂಬುದು ಜೀವನದ ಪ್ರಮುಖ ಘಟ್ಟ (Turning Point). ಇಲ್ಲಿ ಉತ್ತಮ ಅಂಕ ಗಳಿಸಿದರೆ ಭವಿಷ್ಯದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯವಾಗುತ್ತದೆ. ಜೀವನದಲ್ಲಿ ಬಡತನ ಎನ್ನುವುದು ಎಲ್ಲರಿಗೂ ಕಾಡುತ್ತದೆ, ಆದರೆ ಅದನ್ನು ಲೆಕ್ಕಿಸದೆ ಗುರಿಯತ್ತ ಮುನ್ನುಗ್ಗಿದಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ," ಎಂದರು.
ಮಕ್ಕಳೇ ನಿಜವಾದ ಆಸ್ತಿ "ಪೋಷಕರು ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ, ಮಕ್ಕಳನ್ನೇ ದೇಶದ ಉತ್ತಮ ಆಸ್ತಿಯನ್ನಾಗಿ ರೂಪಿಸಬೇಕು. ಮಕ್ಕಳಿಗೆ ಎಷ್ಟು ಸಂಪತ್ತು ನೀಡುತ್ತೇವೆ ಎಂಬುದಕ್ಕಿಂತ, ಎಷ್ಟರ ಮಟ್ಟಿಗೆ ವಿದ್ಯೆ, ಬುದ್ಧಿ ಮತ್ತು ಸಂಸ್ಕೃತಿಯನ್ನು ಕಲಿಸುತ್ತೇವೆ ಎಂಬುದು ಬಹಳ ಮುಖ್ಯ," ಎಂದು ಅವರು ಕಿವಿಮಾತು ಹೇಳಿದರು. ಯಾವುದೇ ಸಾಧನೆ ಮಾಡಲು ಸಾಧಕರ ಮಾರ್ಗದರ್ಶನ ಮತ್ತು ಆಶೀರ್ವಾದ ನಮ್ಮ ಮೇಲಿದ್ದಾಗ ಯಶಸ್ಸು ಸುಲಭವಾಗುತ್ತದೆ ಎಂದು ಅವರು ತಿಳಿಸಿದರು.

ಗಣ್ಯರಿಗೆ ಗೌರವ ಸಮರ್ಪಣೆ

ಇದೇ ಸಂದರ್ಭದಲ್ಲಿ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಸೇರಿ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ರಾಮಾಯಣ ಮಹಾಕಾವ್ಯ ರಚಿಸಿದ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರು:

ಈ ಅಭಿನಂದನಾ ಸಮಾರಂಭದಲ್ಲಿ ಸಿದ್ದರಾಮಯ್ಯ ಸ್ವಾಮಿ, ಬಸಪ್ಪ ಗೌಡ, ಅಂಬರೀಶ್ (ಮಾಜಿ ಗ್ರಾಮ ಪಂಚಾಯತಿ ಸದಸ್ಯರು), ದೊಡ್ಡ ರಮೇಶ್, ಹುಚ್ಚಪ್ಪ, ನಾಗರಾಜ್ ನಾಯಕ್ ಹಾಗೂ ಸಾಧಕ ವಿದ್ಯಾರ್ಥಿ ಮಲ್ಲಿಕಾರ್ಜುನ ಸ್ವಾಮಿ ಮತ್ತು ಅವರ ಕುಟುಂಬದವರು ಉಪಸ್ಥಿತರಿದ್ದರು.

## ಸಣ್ಣ ನೀರಾವರಿ, ಅಂತರ್ಜಲ ಅಭಿವೃದ್ಧಿಗೆ ಆದ್ಯತೆ : ಅಧಿಕಾರಿಗಳಿಗೆ ಸಚಿವ ಎನ್.ಎಸ್. ಬೋಸರಾಜು ಸೂಚನೆ

ಧೈರ್ಯದ ದಾರಿ



**ಬೆಂಗಳೂರು, ಮೇ 6:** ಎಲ್ ನಿನೋ2026 ಪರಿಣಾಮದಿಂದ ರಾಜ್ಯದಲ್ಲಿ ಎದುರಾಗಬಹುದಾದ ಜಲ ಸಂಕಷ್ಟ ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವ ಉದ್ದೇಶದಿಂದ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ವತಿಯಿಂದ ಉನ್ನತ ಮಟ್ಟದ ತಾಂತ್ರಿಕ ಸಮಾಲೋಚನಾ ಹಾಗೂ ಪರಿಶೀಲನಾ ಸಭೆಯನ್ನು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ತಿನ ಸಭಾ ನಾಯಕರಾದ N. S. Boseraju ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ದಕ್ಷಿಣ ವಿಭಾಗದ ಮುಖ್ಯ ಅಭಿಯಂತರರ ಕಚೇರಿಯಲ್ಲಿ ನಡೆಸಲಾಯಿತು.

ಸಭೆಯಲ್ಲಿ Indian Institute of Science «eÁÕ¤UÀ¼ÀÄ, Karnataka State Remote Sensing Applications Centre, Karnataka State Natural Disaster Monitoring Centre, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ Karnataka State Council for Science and Technology ಅಧಿಕಾರಿಗಳು ಭಾಗವಹಿಸಿ ರಾಜ್ಯದಲ್ಲಿ ಲಭ್ಯವಿರುವ ನೀರಿನ ಸಮರ್ಪಕ ಸಂರಕ್ಷಣೆ ಹಾಗೂ ಅಂತರ್ಜಲ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ಕುರಿತು ಸಲಹೆಗಳನ್ನು ನೀಡಿದರು.

ಸಾರ್ವಜನಿಕರಲ್ಲಿ ಮಳೆ ನೀರು ಕೊಯ್ಲು ಪದ್ಧತಿ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ತಜ್ಞರು ಅಭಿಪ್ರಾಯಪಟ್ಟರು. ಮುಂದಿನ ದಿನಗಳಲ್ಲಿ ಎಲ್ ನಿನೋ ಪ್ರಭಾವವನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿರುವ ಕೆರೆಗಳು, ಪಿಕ್-ಅಪ್ ಡ್ಯಾಂಗಳು ಹಾಗೂ ಕಿಂಡಿ ಅಣೆಕಟ್ಟುಗಳಲ್ಲಿ ಸಂಗ್ರಹವಾಗಿರುವ ನೀರು ಸೋರಿಕೆಯಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮುಂದಿನ ನಾಲ್ಕರಿಂದ ಐದು ದಿನಗಳೊಳಗೆ ತಮ್ಮ ವ್ಯಾಪ್ತಿಯ ಕೆರೆಗಳು ಹಾಗೂ ಜಲ ಸಂರಕ್ಷಣಾ ರಚನೆಗಳಿಗೆ ಸ್ಥಳ ಪರಿಶೀಲನೆ ನಡೆಸಿ ಪ್ರಸ್ತುತ ವಸ್ತುಸ್ಥಿತಿಯ ಸಮಗ್ರ ವರದಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ತಜ್ಞರ ಸಲಹೆಯಂತೆ ಇಲಾಖೆಯ ಅಧೀನದಲ್ಲಿರುವ 18 ವಲಯಗಳ ಕಾರ್ಯಪಾಲಕ ಇಂಜಿನಿಯರ್‌ಗಳು ತಮ್ಮ ವ್ಯಾಪ್ತಿಯ ಎಲ್ಲಾ ಕೆರೆಗಳು, ಅಣೆಕಟ್ಟುಗಳು ಹಾಗೂ ಜಲಾಶಯಗಳ ನಿರ್ವಹಣೆಯ ಸಂಪೂರ್ಣ ಉಸ್ತುವಾರಿ ವಹಿಸಿಕೊಂಡು ಸಣ್ಣ ಪ್ರಮಾಣದ ನೀರಿನ ಸೋರಿಕೆಯೂ ಆಗದಂತೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

## ಮೇ.11ರಂದು ರಾಯಚೂರಿನ ಐಟಿಐ ಕಾಲೇಜಿನಲ್ಲಿ ಶಿಶಿಕ್ಷು ಮೇಳ

**ರಾಯಚೂರು ಮೇ.06:** 2026-27ನೇ ಸಾಲಿನಲ್ಲಿ ಪಿ.ಎಮ್.ಎನ್.ಎ.ಎಮ್ ವತಿಯಿಂದ ನಗರದ ಮಾಣಿಕ ರಾಯಚೂರು ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮೇ.11ರ ಬೆಳಿಗ್ಗೆ 10ಗಂಟೆಗೆ ಶಿಶಿಕ್ಷು ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಈ ಶಿಶಿಕ್ಷು ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಶಿಕ್ಷು ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದರಿಂದ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಮೇಳದಲ್ಲಿ ಕೆ.ಪಿ.ಸಿ, ವೈ.ಟಿ.ಪಿ.ಎಸ್, ಟೋಯೋಟಾ, ಹೋಂಡಾ ಪ್ರೈವೇಟ್ ಲಿಮಿಟೆಡ್ ಕೋಲಾರ, ಕೇನ್ಸ ಟೆಕ್ನಾಲಜಿ ಇಂಡಿಯಾ ಲಿಮಿಟೆಡ್, ಎಲ್.ಎನ್.ಟಿ, ಜೆ.ಎಸ್,ಡ್ಬ್ಲು ಹಾಗೂ ಬೆಂಗಳೂರು ಮತ್ತು ಹೈದ್ರಾಬಾದ್ ನ ಪ್ರತಿಷ್ಟಿತ ಬಹುರಾಷ್ಟ್ರೀಯ (ಮಲ್ಟಿ ನ್ಯಾಷನಲ್) ಕಂಪನಿಗಳು ಭಾಗವಹಿಸಲಿವೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9036684778, 9035198134, 9538003397, 8904784507ಗೆ ಸಂಪರ್ಕ ಮಾಡಬಹುದಾಗಿದೆ ಅಥವಾ ರಾಯಚೂರು ನಗರದ ಮಾಣಿಕ್ ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಕಚೇರಿಯ ಸಮಯದಲ್ಲಿ ಭೇಟಿ ನೀಡಿ, ಮಾಹಿತಿ ಪಡೆಯಬಹುದಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕು ವಿಶ್ವಕರ್ಮ ಸಮಾಜದ ನೂತನ ಅಧ್ಯಕ್ಷರಾಗಿ ಮೌನೇಶ ಆಚಾರಿ ಹಾಲ್ವಿ ಆಯ್ಕೆ



ಧೈರ್ಯದ ದಾರಿ

**ಮಾನ್ವಿ:** ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ನೂತನ ತಾಲೂಕು ಘಟಕದ ಅಧ್ಯಕ್ಷರಾಗಿ ಅಯ್ಕೆ ಗೊಂಡ ಮೌನೇಶ ಆಚಾರಿ ಹಾಲ್ವಿ ರವರನ್ನು ರಾಜ್ಯ ಯುವ ಮುಖಂಡರಾದ ರವಿಬೋಸರಾಜು ಅಭಿನಂದಿಸಿದರು.

## ಮನೆ ಕೆಲಸದಾಕೆ ಈಗ ಪಶ್ಚಿಮ ಬಂಗಾಳದ ಶಾಸಕಿ: ಅತ್ಯಾಚಾರ, ಕೊಲೆ ಸಂತ್ರಸ್ತೆಯ ತಾಯಿಯೂ ಆದ್ರು MLA!



**ಕಲ್ಕತ್ತಾ, ಮೇ 06:**ಪಶ್ಚಿಮ ಬಂಗಾಳ ವಿಧಾನಸಭಾ ಫಲಿತಾಂಶ ಹೊರಬಿದ್ದಿದ್ದು, ಆಡಳಿತಾರೂಢ ಟಿಎಂಸಿ ಧೂಳೀಪಟವಾಗಿದ್ದರೆ ಬಿಜೆಪಿ 200ಕ್ಕೂ ಅಧಿಕ ಸ್ಥಾನಗಳನ್ನು ಪಡೆದುಕೊಂಡು ಪ್ರಚಂಡ ಗೆಲುವು ಸಾಧಿಸಿದೆ. ಈ ನಡುವೆ ಭಾರತೀಯ ಜನತಾ ಪಕ್ಷದಿಂದ ಗೆದ್ದ ಕೆಲ ಜನ ಸಾಮಾನ್ಯ ಅಭ್ಯರ್ಥಿಗಳು ಗಮನ ಸೆಳೆದಿದ್ದಾರೆ.
ಆಸ್ಗ್ರಾಮ ಕ್ಷೇತ್ರದಿಂದ ಸ್ಪರ್ಧಿಸಿದ್ದ ಮನೆ ಕೆಲಸ ಮಾಡುವ ಮಹಿಳೆ ಗೆದ್ದು ಬೀಗಿದ್ದರೆ, ಅತ್ತ ಪಾನಿಹಾಟಿಯಲ್ಲಿ ಕಣಕ್ಕಿಳಿದಿದ್ದ ಆರ್‌ಜಿ ಕಾರ್ ಮೆಡಿಕಲ್ ಕಾಲೇಜಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಸಂತ್ರಸ್ತೆಯ ತಾಯಿಯೂ ವಿಜಯಪತಾಕೆ ಹಾರಿಸಿರೋದು ದೇಶದ್ಯಾಂತ ಸುದ್ದಿಯಾಗಿದೆ.

ಶಾಸಕಿಯಾದ ಮನೆ ಕೆಲಸದಾಕೆ

ಮನೆ ಕೆಲಸ ಮಾಡುತ್ತ ತಿಂಗಳಿಗೆ ಕೇವಲ 2,500 ರೂ. ಆದಾಯ ಹೊಂದಿದ್ದ ಕಲಿತಾ ಮಾಝಿ ಆಸ್ಗ್ರಾಮ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಇವರು ರಾಜಕೀಯಕ್ಕೆ ಬರಲು ಮುನ್ನ ನಾಲ್ಕು ಮನೆಗಳಲ್ಲಿ ಗೃಹಕಾರ್ಯ ನಿರ್ವಹಿಸುತ್ತಿದ್ದರು. ಜನಾಧಾರಿತ ಅಭ್ಯರ್ಥಿಯಾಗಿ ಗಮನ ಸೆಳೆದಿದ್ದ ಅವರು 1,07,692 ಮತಗಳನ್ನು ಪಡೆದು ಎದುರಾಳಿ ಶ್ಯಾಮ ಪ್ರಸನ್ನ ಲೋಹಾರ್ ಅವರನ್ನು 12,535 ಮತಗಳ ಅಂತರದಿಂದ ಸೋಲಿಸಿದ್ದಾರೆ.

2021ರ ಚುನಾವಣೆಯಲ್ಲಿಯೂ ಸ್ಪರ್ಧಿಸಿದ್ದ ಇವರು, ತೃಣಮೂಲ ಕಾಂಗ್ರೆಸ್‌ನ ಅಭೇದಾನಂದ ಥಾಂಡರ್ ವಿರುದ್ಧ ಸೋತಿದ್ದರು. ಆದರೂ ಬಿಜೆಪಿ ಮತ್ತೆ ಈ ಬಾರಿಯೂ ಅವರಿಗೇ ಟಿಕೆಟ್ ನೀಡಿದ್ದು, ಕಲಿತಾ ಮಾಝಿ ಅವರ ಸ್ಥಳೀಯ ಸಂಪರ್ಕವೇ ಗೆಲುವಿನ ಹಿಂದಿನ ಕಾರಣ ಎನ್ನಲಾಗಿದೆ.

ಅತ್ಯಾಚಾರ ಮತ್ತು ಕೊಲೆ ಸಂತ್ರಸ್ತೆಯ ತಾಯಿ ಈಗ MLA!

ಆರ್‌ಜಿ ಕಾರ್ ಮೆಡಿಕಲ್ ಕಾಲೇಜಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಸಂತ್ರಸ್ತೆ ತಾಯಿ, ಬಿಜೆಪಿ ಅಭ್ಯರ್ಥಿ ರತ್ನಾ ದೇಬನಾಥ್ ಪಾನಿಹಾಟಿ ಕ್ಷೇತ್ರದಲ್ಲಿ ಭರ್ಜರಿ ಜಯ ಸಾಧಿಸಿದ್ದಾರೆ. ಆ ಮೂಲಕ ತಮ್ಮ ಮೊದಲ ಚುನಾವಣೆಯಲ್ಲೇ ಗೆಲುವಿನ ನಗೆ ಬೀರಿದ್ದಾರೆ.
ರತ್ನಾ ದೇಬನಾಥ್ ಅವರು ತೃಣಮೂಲ ಕಾಂಗ್ರೆಸ್ ಅಭ್ಯರ್ಥಿ ತೀರ್ಥಂಕರ ಘೋಷ್ ಅವರನ್ನು 28,836 ಮತಗಳ ಅಂತರದಿಂದ ಸೋಲಿಸಿದ್ದು, ಒಟ್ಟು 87,977 ಮತಗಳು ಇವರಿಗೆ ಬಿದ್ದಿವೆ. ಪ್ರತಿಸ್ಪರ್ಧಿ ಘೋಷ್ 59,141 ವೋಟ್ಗಳನ್ನು ಪಡೆದಿದ್ದಾರೆ.

ಸಂದೇಶಖಾಲಿ ಹಿಂಸಾಚಾರ ಪ್ರಕರಣದ ವೇಳೆ ತಮ್ಮ ಮಗಳನ್ನು ಕೈಯಲ್ಲಿ ಹಿಡಿದು ಪ್ರತಿಭಟನೆ ನಡೆಸಿದ್ದ ರೇಖಾ ಪಾತ್ರಾ ಕೂಡ ಟಿಎಂಸಿ ಅಭ್ಯರ್ಥಿಯನ್ನು ಮಣಿಸಿ ಗೆಲುವಿನ ನಗಾರಿ ಬಾರಿಸಿದ್ದಾರೆ. ಪಾತ್ರಾ 1,00,207 ಮತಗಳನ್ನು ಪಡೆದರೆ, ಸರ್ಕಾರ್ 94,786 ಮತಗಳನ್ನು ಪಡೆದಿದ್ದಾರೆ.

ಇವರ ಗೆಲುವಿನ ಅಂತರ 5,421 ಮತಗಳು. ಒಟ್ಟಾರೆಯಾಗಿ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಐತಿಹಾಸಿಕ ಗೆಲುವು ಸಾಧಿಸಿ 206 ಸ್ಥಾನಗಳನ್ನು ಗೆದ್ದು ಬಹುಮತ ಪಡೆಯುವ ಮೂಲಕ 15 ವರ್ಷಗಳ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ ಆಡಳಿತಕ್ಕೆ ತೆರೆ ಎಳೆದಿದೆ.

## ತುರ್ತು ಕಾಮಗಾರಿಗಳಿಗೆ ಇಂದು ಪುನಃ 72 ಕೋಟಿ ರೂ.ಬಿಡುಗಡೆಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ರೂ 208.67 ಕೋಟಿ. ಬಿಡುಗಡೆ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು/ಕಲಬುರಗಿಮೇ.6–**ರಾಜ್ಯದ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಅಭಾವವನ್ನು ತಗ್ಗಿಸಲು ಸರ್ಕಾರವು ಸಮರೋಪಾದಿಯಲ್ಲಿ ಕ್ರಮ ಕೈಗೊಂಡಿದ್ದು, ಮಾರ್ಚ್ 2026 ರಿಂದ ಇಂದಿನವರೆಗೆ ಒಟ್ಟು 208.67 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮಂಗಳವಾರ ಈ ಕುರಿತು ಮಾಹಿತಿ ನೀಡಿರುವ ಅವರು, ತುರ್ತು ಕಾಮಗಾರಿಗಳಿಗಾಗಿ ಇಂದು ಪುನಃ 72 ಕೋಟಿಗಳ ಹೆಚ್ಚುವರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಈ ಅನುದಾನವನ್ನು ಪ್ರಸಕ್ತ ಸಾಲಿನ ಹೊಸ ಕಾಮಗಾರಿಗಳ ಜೊತೆಗೆ, ಈ ಹಿಂದೆ ಟಾಸ್ಕ್ ಫೋರ್ಸ್ ಸಮಿತಿಯಿಂದ ಅನುಮೋದನೆ ಪಡೆದು ಪೂರ್ಣಗೊಂಡಿದ್ದ ಕಾಮಗಾರಿಗಳ ಬಾಕಿ ಪಾವತಿಗಾಗಿ ವಿನಿಯೋಗಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

**ತುರ್ತು ಕ್ರಮಗಳಿಗೆ ಸೂಚನೆ:** ಬೇಸಿಗೆಯ ತೀವ್ರತೆಯಿಂದ ಅಂತರ್ಜಲ ಮಟ್ಟ ಕುಸಿದು ಕೊಳವೆಬಾವಿಗಳ ಇಳುವರಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ, ಜಿಲ್ಲಾಡಳಿತಗಳು ಲಭ್ಯವಿರುವ ಕೊಳವೆಬಾವಿಗಳನ್ನು ಫ್ಲಶಿಂಗ್ ಮಾಡಲು ಮತ್ತು ಆಳಗೊಳಿಸಲು ಸಚಿವರು ನಿರ್ದೇಶನ ನೀಡಿದ್ದಾರೆ.

ನೀರಿನ ಮೂಲಗಳಿಲ್ಲದ ಕಡೆಗಳಲ್ಲಿ ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆಯಲು ಅಥವಾ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅನುಮತಿ ನೀಡಲಾಗಿದೆ. ಅನಿವಾರ್ಯ ಸಂದರ್ಭಗಳಲ್ಲಿ ಭೂವಿಜ್ಞಾನಿಗಳ ವರದಿ ಆಧರಿಸಿ ಹೊಸ ಕೊಳವೆಬಾವಿ ಕೊರೆಯಲು ಮತ್ತು ಪಂಪಿಂಗ್ ಯಂತ್ರಗಳನ್ನು ಅಳವಡಿಸಲು ಸೂಚಿಸಲಾಗಿದೆ.

**ಪರಿಸ್ಥಿತಿ ಅವಲೋಕನ:** ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆಯುಂಟಾಗದಂತೆ ಸಮರ್ಪಕವಾಗಿ ನೀರು ಸರಬರಾಜು ಮಾಡಲು ನಿರಂತರವಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳು ಟಾಸ್ಕ್ ಫೋರ್ಸ್ ಸಭೆಗಳನ್ನು ನಡೆಸುತ್ತಿದ್ದಾರೆ, ಸರ್ಕಾರದ ಮಟ್ಟದಲ್ಲಿ ನಿಯಮಿತವಾಗಿ ಪರಿಸ್ಥಿತಿಯನ್ನು ಅವಲೋಕಿಸಲಾಗುತ್ತಿದೆ ಎಂದೂ ಸಚಿವರು ಹೇಳಿದ್ದಾರೆ.

**ಪಾರದರ್ಶಕತೆಗೆ ಆದ್ಯತೆ:** "ಈ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ ಮತ್ತು ಆರ್ಥಿಕ ಸಂಹಿತೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಆಧರಿಸಿ ಮಾತ್ರ ಬಿಲ್‌ಗಳನ್ನು ಪಾವತಿಸಲು ಮತ್ತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಿಂದ ಕಡ್ಡಾಯವಾಗಿ ಅನುಮೋದನೆ ಪಡೆಯಲು ಅಧಿಕಾರಿಗಳಿಗೆ ಸೂಚಿಸಲಾಗಿದೆ" ಎಂದು ಸಚಿವರು ತಿಳಿಸಿದ್ದಾರೆ. ಈ ಬೃಹತ್ ಮೊತ್ತದ ಬಿಡುಗಡೆಯಿಂದಾಗಿ ರಾಜ್ಯದ 31 ಜಿಲ್ಲೆಗಳ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತಕ್ಷಣದ ಪರಿಹಾರ ದೊರೆಯಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕ.ಸಾ.ಪ ಇನ್ನೂ ಹೆಮ್ಮರವಾಗಿ ಬೆಳೆಯಲಿ : ಅಪ್ಸರಾಬೇಗಂ ಚಪ್ಪರಬಂದ



**ವಿಜಯಪುರ:ಮೇ.6:** ಕನ್ನಡ ತಾಯಿ ಭಾಷೆ, ಮಾತೃಭಾಷೆ, ನುಡಿ ಭಾಷೆ ಕನ್ನಡ ಅತ್ಯಂತ ಪ್ರಾಚೀನ ಭಾಷೆ. ಆದಿಕವಿ ಪಂಪನಿಂದ ಹಿಡಿದು ಕುವೆಂಪುರವರವರೆಗೆ ಕನ್ನಡ ನಾಡು–ನುಡಿ, ನೆಲ–ಜಲ, ಭಾಷೆಯ ಬಗ್ಗೆ ಅಭಿಮಾನ ಮೂಡಿಸುವ ಮೂಲಕ ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು ಇನ್ನೂ ಹೆಮ್ಮರವಾಗಿ ಬೆಳೆಯಲಿ ಎಂದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಅಪ್ಸರಾಬೇಗಂ ಚಪ್ಪರಬಂದ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು 1915ರಲ್ಲಿ ಸ್ಥಾಪನೆಯಾದ ಶತಮಾನದಷ್ಟು ಹಳೆಯದಾದ ಈ ಸಂಸ್ಥೆ ಸಾಹಿತ್ಯಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸುವಲ್ಲಿ ತನ್ನದೇಯಾದ ಮಹತ್ವದ ಪಾತ್ರ ವಹಿಸಿದೆ ಎಂದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಕಸಾಪ ಗೌರವ ಕೋಶಾಧ್ಯಕ್ಷ ಅಭಿಷೇಕ ಚಕ್ರವರ್ತಿ ಮಾತನಾಡಿ ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ದೊರಕಿದ್ದು, ಅಷ್ಟ ದಿಗ್ಗಜ ಕವಿಗಳು ಜ್ಞಾನಪೀಠ ಪ್ರಶಸ್ತಿಯನ್ನು ಮುಡಿಗೇರಿಸುವ ಮೂಲಕ ಕನ್ನಡ ಭಾಷೆ, ಸಾಹಿತ್ಯಕ್ಕೆ ಬಹುದೊಡ್ಡ ಕೊಡುಗೆ ನೀಡಿದ ಅಭಿಮಾನದ ಭಾಷೆ ಕನ್ನಡ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯ ಕುರಿತು ವಿಶೇಷ ಉಪನ್ಯಾಸ ನೀಡಿದ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ.ಮಾಧವ ಗುಡಿ ಮಾತನಾಡಿ, ಸಾಹಿತ್ಯವೆಂದರೆ ಭಾವನೆಗಳ ಹೂವಿನ ಹೊದಿಕೆ, ಕನ್ನಡ ಸಾಹಿತ್ಯವೆಂದರೆ ಸುಗಂಧದ ಭಂಡಾರವೆನ್ನುತ್ತ ಕನ್ನಡ– ಕನ್ನಡಿಗ– ಕರ್ನಾಟಕದ ಅಭಿಮಾನ ನಮ್ಮೆಲ್ಲರಲ್ಲಿ ಮೊಳಗಬೇಕು.

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ ಅವರ ವಿಶೇಷ ತ್ಯಾಗ,ಶ್ರಮದ ಫಲವಾಗಿ ದಿವಾನರಾದ ಸರ್ ಎಂ ವಿಶ್ವೇಶ್ವರಯ್ಯ, ಸರ್ ಮಿರ್ಜಾ ಇಸ್ಮಾಯಿಲ್ ಅವರ ವಿಶೇಷ ಕಾಳಜಿ, ಭಾಷೆಯ ಅಭಿಮಾನದಿಂದ ಹುಟ್ಟಿಕೊಂಡ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕಸಾಪದ ಹುಟ್ಟಿಗೆ ಕಾರಣೀಕರ್ತರಾದ ಅನೇಕ ಮಹನೀಯರನ್ನು ಸ್ಮರಣೆ ಮಾಡಿಕೊಳ್ಳುವ ಸುದಿನವೇ ಈ ಸಂಸ್ಥಾಪನಾ ದಿನಾಚರಣೆ ಎಂದ ಅವರುಕನ್ನಡ ಸಾಹಿತ್ಯ ಪರಿಷತ್ತು 1940ರಲ್ಲಿ ತನ್ನ ರಜತ ಮಹೋತ್ಸವವನ್ನು, 1965ರಲ್ಲಿ ತನ್ನ ಸುವರ್ಣ ಮಹೋತ್ಸವವನ್ನು, 2015ರಲ್ಲಿ ತನ್ನ ಶತಮಾನೋತ್ಸವವನ್ನು ಆಚರಿಸಿ ಕನ್ನಡಿಗರ ಸ್ವಾಭಿ ಮಾನದ ಸಂಕೇತವಾಗಿ, ಕನ್ನಡಿಗರ ಸ್ಥಾನಮಾನ, ಹಿತಾಸಕ್ತಿ ಮತ್ತು ಅಸ್ಮಿತೆಯನ್ನು ರಕ್ಷಿಸುವ ಕಾರ್ಯವನ್ನು ಪರಿಷತ್ತು ನಿ ರಂತರವಾಗಿ ಮಾಡುತ್ತಿದೆ ಎಂದರು.

ಕಾರ್ಯಕ್ರಮದ ವೇದಿ ಕೆಯಲ್ಲಿ ಮುಖ್ಯ ಅತಿಥಿಗಳಾಗಿ ಆಶಾ ಬಸನಗೌಡ ಬಿರಾದಾರ, ಚಂದ್ರಕಾಂತ ಡೊಣಗಿ, ಭಾಗೀರಥಿ ಸಿಂಧೆ, ವಿಜಯಲಕ್ಷ್ಮಿ ಹಳಕಟ್ಟಿ, ಮಹಾದೇವ ಮೋಪಗಾರ ಮುಂತಾದವರು ಉಪಸ್ಥಿ ತರಿದ್ದು ಮಾತನಾಡಿದರು.ಸುನಂದಾ ಕೋರಿ ಪ್ರಾರ್ಥಿಸಿದರು. ರಿಯಾಜ ಪಿಂಜಾರ ಸ್ವಾಗತಿಸಿ ಗೌರವಿಸಿದರು. ಜಯಶ್ರೀ ಹಿರೇಮಠ ನಿರೂಪಿಸಿದರು.

ಶಶಿಕಲಾ ನಾಯ್ಕೋಡಿ ಕನ್ನಡದ ಗೀತೆಗಳನ್ನು ಹಾಡಿ ರಂಜಿಸಿದರು. ಮಂಜುಳಾ ಕಾಳಗಿ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ, ಮಮತಾ ಮುಳಸಾವಳಗಿ, ಅರ್ಜುನ ಶಿರೂರ, ವಾಯ್ ಎಚ್ ಲಂಬೂ, ಬಿ. ಎಂ. ಆಜೂರ,ಕೆ. ಎಸ್. ಹಣಮಾಣಿ, ಲತಾ ಗುಂಡಿ, ಶ್ರೀಕಾಂತ ನಾಡಗೌಡ, ರಾಜೇಶ್ವರಿ ಮೋಪಗಾರ, ಮೆಹತಾಬ ಕಾಗವಾಡ, ರೂಪಾ ರಜಪೂತ, ಪ್ರೊ.ರಾ.ಶಿ.ವಾಡೇದ, ಮಹೇಶ ಕ್ಯಾತನ, ಸಂಗೀತಾ ರಾಠೋಡ, ನೀಲಾಂಬಿಕಾ ಬಿರಾದಾರ, ಲಕ್ಷ್ಮೀ ಬಿರಾದಾರ, ರಮೇಶ ಹಾದಿ ಮನಿ, ಸರ್ವಾನಂದ ಕೂಬರಡ್ಡಿ, ಚಂದ್ರಕಾಂತ ಚಲವಾದಿ, ಶಿವಲೀಲಾ ಹಿರೇಮಠ, ಶಿವಾಜಿ ಮೋರೆ, ಎಸ್.ಬಿ.ಬಿರಾದಾರ, ರಾವಸಾಹೇಬ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

ತಾಲೂಕಾ ಕಸಾಪದಿಂದ 112ನೇ ಸಂಸ್ಥಾಪನಾ ದಿನಾಚರಣೆ: ಮಧ್ಯಾಹ್ನ 2.00ಗಂಟೆಯಿಂದ ವಿಜಯಪುರ ತಾಲೂಕಾ ಸಾಹಿತ್ಯ ಪರಿಷತ್ತಿನ ವತಿಯಿಂದ 112ನೇ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾ ಯಿತು. ತಾಲೂಕಾ ಕಸಾಪ ಗೌರವ ಅಧ್ಯಕ್ಷರಾದ ಬಿ. ಎಂ. ಅಜೂರ ಪುಷ್ಪಾರ್ಚನೆ ಮಾಡಿ ಮಾತನಾಡಿ ಕನ್ನಡದ ಅನೇಕ ಕಟ್ಟಾಳುಗಳು ತಮ್ಮ ತ್ಯಾಗ ಮತ್ತು ಪರಿಶ್ರಮದ ಮೂಲಕ ಕಟ್ಟಿ ಹೋದ ಈ ಸಂಸ್ಥೆ ಸೂರ್ಯ ಚಂದ್ರರಿರುವವರೆಗೆ ಅಜರಾಮರವಾಗಿರಲಿ ಎಂದರು. ಅಧ್ಯಕ್ಷತೆಯನ್ನು ವಿಶ್ರಾಂತ ಅರಣ್ಯ ಇಲಾಖೆ ಅಧಿಕಾರಿ ಮಹೇಶ ಕ್ಯಾತನ ವಹಿಸಿ ಮಾತನಾಡಿದರು. ರಾಜೇಶ್ವರಿ ಮೋಪಗಾರ, ಸುನಂದಾ ಕೋರಿ, ರಾ. ಶಿ. ವಾಡೇದ, ಸರ್ವಾನಂದ ಕೂಬರಡ್ಡಿ, ಅರ್ಜುನ ಶಿರೂರ, ಶ್ರೀಕಾಂತ ನಾಡಗೌಡ ವೇದಿಕೆ ಮೇಲಿದ್ದರು.ಮೆಹ ತಾಬ ಕಾಗವಾಡ ಪ್ರಾರ್ಥಿಸಿದರು. ಮಮತಾ ಮುಳಸಾವಳಗಿ ನಿರೂಪಿಸಿದರು. ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ ಪ್ರಾಸ್ತಾವಿ ಕವಾಗಿ ಮಾತನಾಡಿದರು.

ಬಸವರಾಜ ಬಿರಾದಾರ ವಂದಿಸಿ ದರು.ಕಸಾಪ ನಗರ ಘಟಕದಲ್ಲಿ 112ನೇ ಸಂಸ್ಥಾಪನಾ ದಿನಾ ಚರಣೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಸಂಜೆ 4.00 ಗಂಟೆಗೆ ಜರುಗಿತು.ಉದ್ಘಾಟನೆ ಯನ್ನು ನಗರ ಘಟಕದ ಗೌರವ ಅಧ್ಯಕ್ಷೆ ಜಯಶ್ರೀ ಹಿರೇಮಠ ಪುಷ್ಪಾ ರ್ಚನೆ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಕನ್ನಡ ಅನ್ನದ ಭಾಷೆ, ಆಡಳಿತ ಭಾಷೆಯಾಗಿ ಬೆಳೆಯಬೇಕು. ನನ್ನ ನುಡಿ,ನಮ್ಮೆಲ್ಲರ ಹೆಮ್ಮೆ ಎಂಬ ಮನೋಭಾ ವನೆ ಎಲ್ಲರಲ್ಲಿ ಮೂಡಬೇಕು ಎಂದರು. ಅಧ್ಯಕ್ಷತೆಯನ್ನು ರಾಜ್ಯ ವಾರ್ತಾ ಇಲಾಖೆಯ ವಿಶ್ರಾಂತ ನಿರ್ದೇಶಕ ಮಲ್ಲಿ ಕಾರ್ಜುನ ಕೆಳಗಡೆ ವಹಿಸಿ ಮಾತನಾಡಿದರು. ಸಾಹಿತಿ ವಾಯ್ ಎಚ್ ಲಂಬೂ ಉಪನ್ಯಾಸ ನೀಡಿದರು.ಶಶಿಕಲಾ ನಾಯ್ಕೋಡಿ, ರೂಪಾ ರಜಪೂತ, ಮಂಜುಳಾ ಕಾಳಗಿ, ಅರ್ಜುನ ಶಿರೂರ, ರಾಜೇಶ್ವರಿ ಹಿಟ್ಟಿನಹಳ್ಳಿ ವೇದಿಕೆ ಮೇಲಿದ್ದರು. ಪ್ರಾರ್ಥಿಸಿದರು. ಮೆಹತಾಬ ಕಾಗವಾಡ ನಿರೂಪಿಸಿದರು. ರಿಯಾಜ ಪಿಂಜಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿ.ಎಸ್.ಬಳ್ಳೂರ ವಂದಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಕಟ್ಟಡ ಬಾಡಿಗೆ ನೀಡಲು ಆಸಕ್ತರಿಂದ ಅರ್ಜಿ ಆಹ್ವಾನ

**ರಾಯಚೂರು ಮೇ.06:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಶೈಕ್ಷಣಿಕ ಸಾಲಿನಿಂದ ಇಲಾಖೆಯಡಿಯಲ್ಲಿ ನೂತನವಾಗಿ ಮಹಿಳಾ ಪದವಿ ಪೂರ್ವ ಕಾಲೇಜ್ ಆರಂಭಿಸಲು ಮಂಜೂರಾತಿ ನೀಡಲಾಗಿದ್ದು, ಈ ಕಾಲೇಜು ಆರಂಭಿಸಲು ನಿರ್ವಹಣೆಗೆ ರಾಯಚೂರು ನಗರದಲ್ಲಿ ಪಿಡಬ್ಲೂಡಿ ಇಲಾಖೆ ನಿಗಧಿ ಪಡಿಸುವ ಮಾಸಿಕ ಬಾಡಿಗೆ ಆಧಾರದ ಮೇಲೆ 20 ಕೊಠಡಿಗಳು ಮತ್ತು ಎಲ್ಲಾ ಮೂಲಭೂತ ಸೌಕರ್ಯ ಒಳಗೊಂಡಿರುವ ಸುಸಜ್ಜಿತ ಕಟ್ಟಡ ಬಾಡಿಗೆ ನೀಡಲು ಸಿದ್ಧವಿರುವ ಆಸಕ್ತ ಕಟ್ಟಡಗಳ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಕಟ್ಟಡಗಳ ಮಾಲೀಕರು ಕಟ್ಟಡ ಛಾಯಚಿತ್ರ ಮತ್ತು ದಾಖಲೆಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಅರಿವು ಮೂಡಿಸುವ ಮಾಹಿತಿ ಕೇಂದ್ರ ಹಾಸ್ಮೀಯಾ ಶಾಲೆ ಕಂಪೌಂಡ ಹಿಂದುಗಡೆ ಬಾಲಭವನ ಹತ್ತಿರ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.06 :**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಶೈಕ್ಷಣಿಕ ಸಾಲಿನಿಂದ ನೂತನವಾಗಿ ಮಹಿಳಾ ಪದವಿ ಪೂರ್ವ ಕಾಲೇಜ್ ಅನ್ನು ಚಂದ್ರಬಂಡಾ ರಸ್ತೆಯ ವಿಜ್ಞಾನ್ ಶಾಲೆಯ ಎದುರುಗಡೆ ಇರುವ ಇಲಾಖೆಯ ಕಟ್ಟಡದಲ್ಲಿ ಆರಂಭಿಸಲಾಗುತ್ತಿದ್ದು, ವಿವಿಧ ವಿಷಯಗಳ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಕನ್ನಡ ವಿಷಯದ 1 ಉಪನ್ಯಾಸಕರ ಹುದ್ದೆಗೆ ಎಂ.ಎ. ಬಿ.ಎಡ್, ಇಂಗ್ಲೀಷ್ ವಿಷಯದ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿಎಡ್, ಹಿಂದಿ 1 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಉರ್ದು 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಇತಿಹಾಸ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಅರ್ಥಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ರಾಜ್ಯಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಸಮಾಜಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಕಂಪ್ಯೂಟರ್ ಸೈನ್ಸ್ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ವ್ಯವಹಾರ ಅಧ್ಯಯನ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ಅಕೌಂಟೆನ್ಸಿ/ ಲೆಕ್ಕಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ಭೌತಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ರಸಾಯನಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ಗಣಿತಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ಜೀವಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್ ಪಡೆದ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಡಿಗ್ರಿ ಅಂಕಪಟ್ಟಿ, ಸ್ನಾತಕೋತ್ತರ ಪದವಿಯ ಅಂಕಪಟ್ಟಿ, ಬಿಇಡಿ ಅಂಕಪಟ್ಟಿ ಮತ್ತು ಆಧಾರ್ ಕಾರ್ಡ್ಗಳ ಜೆರಾಕ್ಸ್ ಪ್ರತಿಗಳೊಂದಿಗೆ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಲಗತ್ತಿಸಿ ಮೇ.11ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಸಂಪರ್ಕ ಕೇಂದ್ರದ ಸಂಖ್ಯೆ: 9731028420 ಅಥವಾ 9845494630ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರುಣ್ಯಾಶ್ರಮದಲ್ಲಿ ಸ್ವಂತ ನೆಲೆ ಕಲ್ಪಿಸುವಲ್ಲಿ ನಾವೆಲ್ಲರೂ ಪ್ರಾಮಣಿಕ ಪ್ರಯತ್ನ ಮಾಡಬೇಕಾಗಿದೆ : ಡಾ. ನಾಗವೇಣಿ. ಎಸ್ ಪಾಟೀಲ್



ಧೈರ್ಯದ ದಾರಿ

**ಸಿಂಧನೂರು:** ತಾಲೂಕಿನ ದಿದ್ದಿಗಿ ಗ್ರಾಮದ ರೇಷ್ಮಾ ಬೇಗಂ ಖಾಜಾ ಹುಸೇನ್ ಬನ್ನಿಗನೂರು ಈ ದಂಪತಿಗಳ ಮಗನಾದ ಎಂ.ಡಿ. ಶಯಾನ್ ಅವರ ಜನ್ಮ ಸಾರ್ಥಕ ದಿನವನ್ನು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ " ನಿಮ್ಮೊಂದಿಗೆ ನಾವಿದ್ದೇವೆ " ಎನ್ನುವ ವಿಶೇಷ ಕಾರ್ಯಕ್ರಮವನ್ನು ಧರ್ಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಲಾಯಿತು.

ಈ ಕಾರ್ಯಕ್ರಮದಲ್ಲಿ ರೇಷ್ಮಾ ಬೇಗಂ ಖಾಜಾ ಹುಸೇನ್ ಈ ದಂಪತಿಗಳನ್ನು ಆಕ್ರಮದ ವತಿಯಿಂದ ಗೌರವಿಸಲಾಯಿತು. ನಂತರ ಎಂ.ಡಿ.ಶಯಾನ್ ಅವರ ಕುಟುಂಬದಿಂದ ಆಶ್ರಮದ ವ್ಯವಸ್ಥಾಪಕರಾದ ಸುಜಾತ ಮಲದ ಗುಡ್ಡ ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ನಾಗವೇಣಿ. ಎಸ್.ಪಾಟೀಲ್ ಮಾತನಾಡಿ ನಮ್ಮ ಶಯಾನ್ ಅವರ ಜನ್ಮ ಸಾರ್ಥಕ ದಿನವೂ ನೊಂದ ಜೀವಿಗಳ ಕಾರುಣ್ಯ ಕುಟುಂಬದ ಕೂಸುಗಳ ಆಶೀರ್ವಾದದೊಂದಿಗೆ ನೆರವೇರುತ್ತಿರುವುದು ನಮ್ಮ ಭಾರತೀಯ ಸಂಸ್ಕೃತಿ ಸಂಸ್ಕಾರಕ್ಕೆ ಅರ್ಥ ಕಲ್ಪಿಸಿ ಕೊಟ್ಟಂತಾಗಿದೆ. ಇವರ ಕುಟುಂಬ ಬಡತನದಲ್ಲಿ ಇದ್ದರೂ ಸಹ ಅನೇಕ ಜನಪರ ಸಮಾಜಪರ ಕಾರ್ಯಗಳನ್ನು ಮಾಡುತ್ತಿರುವುದು ಮತ್ತು ಜನರ ಪ್ರೀತಿ ವಿಶ್ವಾಸ ಗಳಿಸಿಕೊಂಡಿರುವುದು ಸಮಾಜಕ್ಕೆ ಮಾದರಿಯಾಗಿದೆ.

ನಮ್ಮ ಸಿಂಧನೂರು ನಗರದ ಈ ಕಾರುಣ್ಯ ಆಶ್ರಮವು ಕರುಣೆಯ ಪವಿತ್ರ ಮಂದಿರವಾಗಿದೆ. ಇಂತಹ ಮಂದಿರಕ್ಕೆ ಬರುವ ಭಕ್ತರು ದೇವರುಗಳಾಗಿ ಇಲ್ಲಿರುವಂತಹ ಎಲ್ಲಾ ಜೀವಿಗಳಿಗೆ ಮಕ್ಕಳಾಗಿ ಸಹೋದರರಾಗಿ ಮೊಮ್ಮಕ್ಕಳಾಗಿ ಸೇವೆ ಮಾಡುತ್ತಿರುವುದು ಮಾನವೀಯತೆಗೆ ಮೆರುಗು ತಂದಿದೆ. ಈ ನಮ್ಮ ಸಿಂಧನೂರಿನ ಕಾರುಣ್ಯಾಶ್ರಮಕ್ಕೆ ಸ್ವಂತ ನೆಲೆ ಕಲ್ಪಿಸುವಲ್ಲಿ ನಾವೆಲ್ಲರೂ ಪ್ರಯಾಣಿಕ ಪ್ರಯತ್ನ ಮಾಡಬೇಕಾಗಿದೆ.

ಸುಮಾರು ವರ್ಷಗಳಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅನಾಥಾಶ್ರಮ ಅನಾಥಾಶ್ರಮ ಅಲ್ಲಿನ ಸ್ಥಿತಿ ದೇವಿಯನ್ನು ಪ್ರತಿಯೊಬ್ಬ ಜನರ ಮನೆ ಮನಸ್ಸಿಗೆ ಮುಟ್ಟಿಸಿರುವ ಕೀರ್ತಿ ಕಾರುಣ್ಯ ಆಶ್ರಮಕ್ಕೆ ಸಲ್ಲುತ್ತದೆ. ಇಂದಿನ ಈ ಕಾರ್ಯಕ್ರಮವು ಅತ್ಯಂತ ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದು ಮಾತನಾಡಿ ಖಾಜಾ ಹುಸೇನ್ ಕುಟುಂಬಕ್ಕೆ ಅಭಿನಂದನೆಗಳನ್ನು ತಿಳಿಸಿದರು. ನಂತರ ಕೆ. ಡಿ. ಪಿ. ಸದಸ್ಯರಾದ ಶಫಿವುಲ್ಲಾ ಮಾತನಾಡಿ ಕಾರುಣ್ಯ ಎನ್ನುವ ಕರುಣೆಯ ಕುಟುಂಬವು ಅದೆಷ್ಟು ಅನಾಥರಿಗೆ ಅರಮನೆಯಾಗಿ ಬರೀ ಆಶ್ರಯ ನೀಡುವುದಲ್ಲದೆ ಅವರ ಹಿಂದಿನ ನೋವುಗಳನ್ನು ಮರೆಸಿ ಹೊಸ ಬದುಕನ್ನು ಕಟ್ಟಿಕೊಟ್ಟಿದೆ. ಈ ಆಶ್ರಮದಲ್ಲಿ ಸೇವೆ ಮಾಡಿದ್ದವರು ಕೂಡ ಸಮಾಜಕ್ಕೆ ತಮ್ಮದೇ ಆದಂತ ಸೇವೆ ಸಲ್ಲಿಸುತ್ತಿರುವುದು ನಮ್ಮ ನಾಡಿಗೆ ಉತ್ತಮ ಕೊಡುಗೆ ನೀಡುವುದರಲ್ಲಿ ಕಾರುಣ್ಯ ಕುಟುಂಬದ ಪಾತ್ರ ಪ್ರಮುಖವಾಗಿದೆ. ಇಂತಹ


ಸೇವಾ ಕಾರ್ಯಗಳಿಗೆ ನಾವು ನೀವೆಲ್ಲರೂ ನಿಮ್ಮೊಂದಿಗಿರುತ್ತೇವೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಖಾಜಾ ಹುಸೇನ್ ಬನ್ನಿಗನೂರು ಪತ್ರ ಕರ್ತರು. ರೇಷ್ಮಾ ಬೇಗಂ.ಶಫೀವುಲ್ಲಾ ಕೆ. ಡಿ. ಪಿ. ಸದಸ್ಯರು. ಸೀರಾಜ್ ಪಾಷಾ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ಭಾರತೀಯ ಜನತಾ ಪಾರ್ಟಿ. ಅಬ್ದುಲ್ ಕರೀಂ ಸಾಬ್ ಜೆ. ಈ. ಈ. ಮೇಲ್ವಿಚಾರಕರು. ಶಿರಿನ್ ಎಸ್.ಕೆ. ಮೇಲ್ವಿಚಾರಕರು. ಸೈಯದ್ ಅಬ್ದುಲ್ ಖಾದರ್. ಮೈಬುನಾ ಬೇಗಂ. ಶಾಕಿರ್ ಹುಸೇನ್. ಶಂಷುದ್ದೀನ್ ಗೋಮರ್ಸಿ.ಷಾ ನವಾಜ್.ಶಾಹಿಸ್ತಾ ಸಂಜುಮ್. ಎಂ. ಡಿ.ಮೈಬೂಬ್ ಸಾಬ್ ಹಾಗೂ ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ.ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ. ಮೀನಾಕ್ಷಮ್ಮ ಲಕ್ಷ್ಮಿ. ಅನೇಕರು ಉಪಸ್ಥಿತರಿದ್ದರು

## ಸೋಲಾರ್ ಬ್ಯಾಟರಿ ಕಳ್ಳತನ–ಬಂಧನ

**ಹನೂರು ಮೇ 6:–** ನೀರೆತ್ತುವ ಮೋಟಾರ್‌ಗಳು ಮತ್ತು ಸೋಲಾರ್ ಬ್ಯಾಟರಿ ಕಳ್ಳತನ ಮಾಡಿದ್ದ ಆರೋಪಿಗಳನ್ನು ಬಂಧಿಸಿರುವ ರಾಮಾಪುರ ಪೊಲೀಸರು ಬಂಧಿತರಿಂದ 2,18,500/– ರೂ ಮೌಲ್ಯದ ಸ್ವತ್ತುಗಳು ಹಾಗೂ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

ತಾಲೂಕಿನ ಚಂಗದಾರಹಳ್ಳಿ ಗ್ರಾಮದ ಮಣಿ ಎಂಬುವರು ತಮ್ಮ ಜಮೀನನ ಷೆಡ್ ನಲ್ಲಿ ಇಟ್ಟಿದ್ದ ಕೊಳವೆಬಾವಿಯ 02 ಸಬ್‌ಮರ್ಸಿಬಲ್ ಪಂಪ್ ಸೆಟ್ ಮೋಟಾರ್‌ಗಳು ಕಳ್ಳತನವಾಗಿರುವ ಬಗ್ಗೆ ರಾಮಾಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸಿ ಕಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಸರ್ಕಲ್ ಇನ್ಸ್ಪೆಕ್ಟರ್ ಚಿಕ್ಕರಾಜಶೆಟ್ಟಿ ರವರ ನಿರ್ದೇಶನದ ಮೇರೆಗೆ ಪಿ.ಎಸ್.ಐ ಮಂಜುನಾಥ ಪ್ರಸಾದ್ ಮತ್ತು ಸಿಬ್ಬಂದಿಗಳ ತಂಡ ಕಾರ್ಯಾಚರಣೆ ನಡೆಸಿ ಆರೋಪಿಗಳಾದ ಮಾರಸ್ವಾಮಿ, ಮಣಿಕಂಠ, ಶ್ರೀರಂಗ, ಕಾರ್ತಿಕ್ ರವರುಗಳನ್ನು ವಾಹನದ ಸಮೇತ ವಶಕ್ಕೆ ಪಡೆದು ನೀರೆತ್ತುವ 02 ಮೋಟಾರ್ ಮತ್ತು



01 ಪಂಪ್ ಹಾಗೂ ಸೋಲಾರ್ ಫೆನ್ಸಿಂಗ್ ಬ್ಯಾಟರಿ, ಎನರ್ಜರ್, ಚಾರ್ಜರ್ (2,18,500 ಮೌಲ್ಯ) ಅನ್ನು ವಶಕ್ಕೆ ಪಡೆದಿದ್ದಾರೆ. ಈ ಪ್ರಕರಣದಲ್ಲಿ ಕಾರ್ತಿಕ್ ಎಂಬುವನ ತಲೆಮರೆಸಿಕೊಂಡಿದ್ದು ಪತ್ತೆಗಾಗಿ ಕ್ರಮ ಕೈಗೊಂಡಿದ್ದಾರೆ.

ಈ ಕಳವು ಪ್ರಕರಣದ ಪತ್ತೆ ಕಾರ್ಯಕ್ಕೆ ಮಾನ್ಯ ಪೊಲೀಸ್ ಅಧೀಕ್ಷಕರಾದ ಮುತ್ತುರಾಜು.ಎಂ ಐ.ಪಿ.ಎಸ್. ರವರು ಪ್ರಶಂಸನೆ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿಯೂ ಸಹ ಇನ್ನೂ ಹೆಚ್ಚಿನ ಕಳ್ಳತನ ಪ್ರಕರಣಗಳನ್ನು ಪತ್ತೆ ಹಚ್ಚಿ ನಿಗ್ರಹಿಸುವಂತೆ ಸೂಚನೆಗಳನ್ನು ನೀಡಿರುತ್ತಾರೆ.

# ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕ್ರಮಕೈಗೊಳ್ಳಿ: ಮಂಜು

**ಕೆ.ಆರ್.ಪೇಟೆ.ಮೇ.06:** ಪಟ್ಟಣದ ಹೊರವಲಯದ ಚಿಕ್ಕೋನಹಳ್ಳಿ ರೇಷ್ಮೆ ತರಬೇತಿ ಕೇಂದ್ರದಲ್ಲಿ ಶಾಸಕ ಹೆಚ್.ಟಿ.ಮಂಜು ಅವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ (ಕೆ.ಡಿ.ಪಿ) ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ತಾಲ್ಲೂಕಿನಾದ್ಯಂತ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದೆ. ಇದಕ್ಕೆ ಕಡಿವಾಣ ಹಾಕಲು ಅಬಕಾರಿ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಮೂಡನಹಳ್ಳಿ ಹಾಗೂ ದೊಡ್ಡಸೋಮನಹಳ್ಳಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟದಿಂದ ಗ್ರಾಮದಲ್ಲಿ ಕಲುಷಿತ ವಾತಾವರಣ ನಿರ್ಮಾಣವಾಗುತ್ತಿದೆ ಈ ಬಗ್ಗೆ ಆ ಗ್ರಾಮಗಳ ಮಹಿಳೆಯರು ನಮ್ಮ ಬಳಿ ಬಂದು ದೂರು ಹೇಳುತ್ತಿದ್ದಾರೆ. ಅಬಕಾರಿ ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ದ ಕಠಿಣ ಕ್ರಮ ಕೈಗೊಂಡು ಗ್ರಾಮಗಳಲ್ಲಿ ಉತ್ತಮ ವಾತಾವರಣ ನಿರ್ಮಿಸಲು ಕ್ರಮ ವಹಿಸಬೇಕು ಎಂದು ಶಾಸಕ ಮಂಜು ಅವರು ಅಬಕಾರಿ ಅಧಿಕಾರಿಗೆ ಸೂಚನೆ ನೀಡಿದರು.

ನಾಗಮಂಗಲ ಆರ್.ಟಿ.ಓ ಕಚೇರಿಯಲ್ಲಿ ಮಧ್ಯವರ್ತಿಗಳ ಮೂಲಕ ಹೋದರೆ ದುಪ್ಪಟ್ಟು ಲಂಚ ಪಡೆದು ಎಲ್ಲಾ ಕೆಲಸಗಳನ್ನು ಅಲ್ಲಿನ ಅಧಿಕಾರಿಗಳು ಮಾಡಿಕೊಡುತ್ತಿದ್ದಾರೆ. ಆದರೆ ಗ್ರಾಹಕರು ನೇರವಾಗಿ ಹೋದರೆ ಯಾವುದೇ ಕೆಲಸಗಳು ನಡೆಯುತ್ತಿಲ್ಲ ಎಂದು ಹೆರಗನಹಳ್ಳಿ ಪ್ರಶಾಂತ್ ಅವರು ದೂರು ನೀಡಿರುವುದನ್ನು ಸಭೆಯಲ್ಲಿ ಉಲ್ಲೇಖಿಸಿ ಮಾತನಾಡಿದ ಶಾಸಕರು ಸಭೆಯಲ್ಲಿ ಹಾಜರಿದ್ದ ನಾಗಮಂಗಲ ಆರ್.ಟಿ.ಓ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಶಾಸಕರು ಕೂಡಲೇ ಹೊರರಾಜ್ಯಗಳ ವಾಹನಗಳಿಗೆ ಎಫ್.ಸಿ ನೀಡುವ ವಿಚಾರದಲ್ಲಿ ನೇರವಾಗಿ ತಮ್ಮ ಕಚೇರಿಗೆ ಬರುವ ಸಾರ್ವಜನಿಕರಿಗೆ ಕೆಲಸ ಮಾಡಿಕೊಡುವ ಮೂಲಕ ಮುಂದಿನ ದಿನಗಳಲ್ಲಿ ಈ ರೀತಿಯ ದೂರುಗಳು ಬಾರದಂತೆ ನೋಡಿಕೊಳ್ಳುವಂತೆ ನಿರ್ದೇಶನ ನೀಡಿದರು.

ರೈತರು ಸ್ವಾಧೀನದಲ್ಲಿರುವ ಭೂಮಿಯನ್ನು ಅರಣ್ಯ ಇಲಾಖೆಯವರು ನಮ್ಮದು ಭೂಮಿ ಎಂದು ದಬ್ಬಾಳಿಕೆ ಮಾಡಿ ರೈತರನ್ನು ಭೂಮಿಯಿಂದ ಒಕ್ಕಲೆಬ್ಬಿಸಲು ಪ್ರಯತ್ನಿಸಿದರೆ ನಾನು ಸಹಿಸುವುದಿಲ್ಲ. ರೈತರು ತಮ್ಮ ಬದುಕಿಗಾಗಿ ಅರಣ್ಯದ ಬಳಿ ಹತ್ತಾರು ವರ್ಷಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುತ್ತಾರೆ ಆದರೆ ಅರಣ್ಯ ಇಲಾಖೆಯವರು ಜಂಟಿ ಸರ್ವೆ ಮಾಡಿಸದೇ ಸದರಿ ಭೂಮಿಯಿಂದ ರೈತರನ್ನು ಒಕ್ಕಲೆಬ್ಬಿಸಿದರೆ ನಾನೇ ರೈತರೊಡಗೂಡಿ ಅರಣ್ಯ ಇಲಾಖೆಯ ವಿರುದ್ದ ಹೋರಾಟ ನಡೆಸಬೇಕಾಗುತ್ತದೆ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಅಲ್ಲದೆ ಕೆರೆ ಕಟ್ಟೆಗಳ ಹೂಳು ತೆಗೆದು ಅಭಿವೃದ್ಧಿ ಮಾಡುವ ರೈತರಿಗೆ ಇದು ಅರಣ್ಯ ಇಲಾಖೆಯ ಭೂಮಿ ಎಂದು ತಡೆ ಮಾಡುವುದು ಸರಿಯಲ್ಲ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ತಾಕೀತು ಮಾಡಿದರು.




ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಜೆಜೆಎಂ ಕೆಲಸ ಪೂರ್ಣಗೊಳ್ಳದೇ ಇದ್ದರೂ ಸಹ ಗ್ರಾಮ ಪಂಚಾಯಿಗಳು ಕೆಲಸ ಪೂರ್ಣಗೊಂಡಿದೆ ಎಂದು ಛಾರ್ಜ್ ತೆಗೆದುಕೊಳ್ಳುತ್ತಿರುವುದು ಕಂಡು ಬರುತ್ತಿದೆ. ಈ ರೀತಿ ಮಾಡಿ ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಟ್ಟು ಸಾರ್ವಜನಿಕರ ಕೆಲಸ ಅರ್ಧಕ್ಕೆ ನಿಂತು ತೊಂದರೆಯಾದರೆ ಸಂಬಂಧಪಟ್ಟ ಪಿಡಿಓ ಹಾಗೂ ಜಿ.ಪಂ.ಕುಡಿಯುವ ನೀರು ವಿಭಾಗದ ಇಂಜಿನಿಯರ್ ಅವರನ್ನು ಹೊಣೆಗಾರರನ್ನಾಗಿ ಮಾಡಿ ಸೂಕ್ತ ಕಾನೂನು ಕ್ರಮಕ್ಕೆ ಮೇಲಧಿಕಾರಿಗಳಿಗೆ ಪತ್ರ ಬರೆಯಬೇಕಾಗುತ್ತದೆ ಎಂದು ಶಾಸಕರು ಎಚ್ಚರಿಸಿದರು. ಬಣ್ಣೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಹಲವಾರು ರೈತರಿಗೆ ಜಮೀನು ಸಾಗುವಳಿ ಚೀಟಿ ಮೂಲಕ ರೈತರಿಗೆ ಸೇರಿದ್ದರೂ ಸಹ ಅಧಿಕಾರಿಗಳು ರೈತರಿಗೆ ಪರಿಹಾರ ಕೊಡಿಸದೇ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಗುತ್ತಿಗೆ ಪಡೆದುಕೊಂಡಿರುವ ಫೇವರೀಚ್ ಮೆಘಾ ಫುಪಾರ್ಕ್ ಮಾಲೀಕನಿಗೆ ಅನುಕೂಲ ಮಾಡಿಕೊಡುತ್ತಿರುವ ಕಾರಣ ಹಲವಾರು ರೈತರಿಗೆ ಅನ್ಯಾಯವಾಗಿದೆ. ಇತ್ತ ಭೂಮಿಯೂ ಇಲ್ಲ, ಅತ್ತ ಪರಿಹಾರವೂ ಇಲ್ಲದಂತಾಗಿದೆ ಈ ಬಗ್ಗೆ ಕಂದಾಯ ಇಲಾಖೆ ಹಾಗೂ ಸರ್ವೆ ಇಲಾಖೆಯ ಅಧಿಕಾರಿಗಳು ತುರ್ತು ಗಮನ ಹರಿಸಿ ಸಾಗುವಳಿ ಚೀಟಿ, ಆರ್.ಟಿ.ಸಿ ಇತರೆ ದಾಖಲೆಗಳು ಇರುವ ರೈತರಿಗೆ ಪರಿಹಾರ ಪಡೆದುಕೊಳ್ಳಲು ಅಗತ್ಯ ಸಹಕಾರ ನೀಡಬೇಕು ಎಂದು ಶಾಸಕರು ತಾಕೀತು ಮಾಡಿದರು.ಹೀಗೆ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಸರಿಯಾಗಿ ಕೆಲಸ ಮಾಡದ ಹಲವು ಇಲಾಖೆಗಳ ಅಧಿಕಾರಿಗಳ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿ ಮುಂದಿನ ಸಭೆಯೊಳಗೆ ಶೇ.100ರಷ್ಟು ಪ್ರಗತಿ ಸಾಧಿಸಿ ವರದಿ ತರಬೇಕು. ಕೆಲವು ಅಧಿಕಾರಿಗಳು ತಮ್ಮ ಕಚೇರಿಯ ಕಿರಿಯ ಅಧಿಕಾರಿಗಳನ್ನು ಸಭೆಗೆ ಕಳಿಸಿ ತಾವು ಗೈರು ಹಾಜರಾಗಿರುವ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿದ ಶಾಸಕರು ಅಂತಹ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡುವಂತೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕೆ.ಸುಷ್ಮಾ ಅವರಿಗೆ ಸಲಹೆ ನೀಡಿದರು.ಸಭೆಯಲ್ಲಿ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್, ತಾ.ಪಂ.ಆಡಳಿತಾಧಿಕಾರಿ ಮೀನುಗಾರಿಕೆ ಜಿಲ್ಲಾ ನಿರ್ದೇಶಕ ಬಾಬಾಸಾಬ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ.ಕುಮಾರ್, ಪಾಂಡವಪುರ ಉಪ ವಿಭಾಗದ ಸಹಾಯಕ ನಿಬಂಧಕ ನಾಗಭೂಷಣ್,ತಾಲ್ಲೂಕು ಪಂಚಾಯತ್ ಇಓ ಕೆ.ಸುಷ್ಮಾ, ತಾಲ್ಲೂಕು ಯೋಜನಾಧಿಕಾರಿ ಎಂ.ಶ್ರೀನಿವಾಸ್, ತಾಲ್ಲೂಕು ಕೆ.ಡಿ.ಪಿ ಸಮಿತಿ ಸದಸ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ರೈತರ ಸಮಸ್ಯೆಗಳ ಕುರಿತು ಕಿಸಾನ ಮೋರ್ಚಾ ಮನವಿ

**ಬೀದರ :ಮೇ.6:**ಜಿಲ್ಲೆಯ ರೈತರ ವಿವಿಧ ಸಮಸ್ಯೆಗಳ ಕುರಿತು ಸಂಯುಕ್ತ ಕಿಸಾನ ಮೋರ್ಚಾ ಜಿಲ್ಲಾ ಘಟಕವು ಜಿಲ್ಲಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕರಿಗೆ ಮನವಿ ಪತ್ರ ಸಲ್ಲಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ. ಸಕ್ಕರೆ ಕಾರ್ಖಾನೆ ಪ್ರಾರಂಭ, ಕಬ್ಬಿನ ಬಾಕಿ ಹಣ ಪಾವತಿ, ರೈತರ ಸಾಲಮನ್ನಾ ಹಾಗೂ ಸಹಕಾರ ಸಂಘಗಳಲ್ಲಿ ನಡೆಯುತ್ತಿರುವ ಅಕ್ರಮಗಳ ತನಿಖೆ ನಡೆಸುವಂತೆ ಇಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಕಳೆದ 2025ರ ಅಕ್ಟೋಬರ್ 12ರಿಂದ 18ರವರೆಗೆ ಬೀದರ ಉಸ್ತುವಾರಿ ಸಚಿವರ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಗಿತ್ತು. ನಂತರ ಜಿಲ್ಲಾಡಳಿತದ ಭರವಸೆಯ ಮೇರೆಗೆ ಧರಣಿಯನ್ನು ಹಿಂಪಡೆಯಲಾಗಿತ್ತು. ಬಳಿಕ ಪ್ರತಿ ಟನ್ ಕಬ್ಬಿಗೆ 2950 ದರ ನಿಗದಿಯಾದರೂ, ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗಳು ರೈತರಿಗೆ ಹಣ ಪಾವತಿಸಿಲ್ಲ ಎಂದು ಆರೋಪಿಸಲಾಗಿದೆ. ಬಾಕಿ ಹಣವನ್ನು ಶೇ.18 ಬಡ್ಡಿಯೊಂದಿಗೆ ಪಾವತಿಸಲು ಹಾಗೂ ತಪ್ಪಿತಸ್ಥರ ವಿರುದ್ಧ ಅಪರಾಧಿಕ ಪ್ರಕರಣ ದಾಖಲಿಸಲು ಒತ್ತಾಯಿಸಲಾಗಿದೆ.

ಹುಮನಾಬಾದ್ ತಾಲೂಕಿನ ಹಳ್ಳಿಖೇಡ್ (ಬಿ)ಯಲ್ಲಿರುವ ಬೀದರ ಸಹಕಾರ ಸಕ್ಕರೆ ಕಾರ್ಖಾನೆಯನ್ನು ನಿಯಮಬಾಹಿರವಾಗಿ ಮುಚ್ಚಲಾಗಿದೆ ಎಂದು ಆರೋಪಿಸಲಾಗಿದ್ದು, ಕಾರ್ಖಾನೆಯನ್ನು ಪುನಃ ಪ್ರಾರಂಭಿಸಿ ಸರ್ಕಾರದ ವಶಕ್ಕೆ ತೆಗೆದುಕೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ. ಅಲ್ಲಿನ ಯಂತ್ರೋಪಕರಣಗಳು ಕಾಣೆಯಾಗಿರುವುದಾಗಿ ತಿಳಿದುಬಂದಿದ್ದು, ಈ ಕುರಿತು ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.

ಕಾರ್ಖಾನೆಯ ಕಾರ್ಮಿಕರಿಗೆ ಸುಮಾರು 32,99,66,051 ಸಂಬಳ ಬಾಕಿ ಹಾಗೂ 1,19,94,599 ಉಪಧಾನ ಪರಿಹಾರ ಬಾಕಿ ಉಳಿದಿರುವುದಾಗಿ ತಿಳಿದುಬಂದಿದೆ. ಈ ಬಾಕಿ ಹಣವನ್ನು ತಕ್ಷಣ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.ಇನ್ನೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಅಕ್ರಮಗಳು ನಡೆಯುತ್ತಿದ್ದು, ಅಷ್ಟೂರು, ಕಿಟ್ಟಾ ಹಾಗೂ ನಂದಗಾಂವ ಪ್ರದೇಶಗಳಲ್ಲಿ ನಡೆದಿರುವ ಪ್ರಕರಣಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.



ಅತಿವೃಷ್ಠಿ ಮತ್ತು ಅನಾವೃಷ್ಠಿಯಿಂದ ರೈತರ ಆರ್ಥಿಕ ಸ್ಥಿತಿ ಹದಗೆಟ್ಟಿರುವುದರಿಂದ, ಎಲ್ಲಾ ರೀತಿಯ ಸಾಲಮನ್ನಾ ಮಾಡಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ. ಜೊತೆಗೆ, ಡಿ.ಸಿ.ಸಿ ಬ್ಯಾಂಕ್ ಹಾಗೂ ಸಕ್ಕರೆ ಕಾರ್ಖಾನೆಗಳಲ್ಲಿ ಖಾಸಗಿ ವ್ಯಕ್ತಿಗಳನ್ನು ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಕ ಮಾಡುವುದನ್ನು ನಿಲ್ಲಿಸಿ, ಸರ್ಕಾರದ ಅಧಿಕಾರಿಗಳನ್ನು ನೇಮಕ ಮಾಡುವಂತೆ ಶಿಫಾರಸು ಮಾಡಬೇಕೆಂದು ಕೋರಲಾಗಿದೆ.

ಕಾರಂಜಾ ಆಣೆಕಟ್ಟಿನಿಂದ ಕಾಲುವೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಶಿವರಾಯ ಮುದಾಳೆ (ಗೌರವಾಧ್ಯಕ್ಷರು), ಮಲ್ಲಿಕಾರ್ಜುನ ಸ್ವಾಮಿ (ಜಿಲ್ಲಾಧ್ಯಕ್ಷರು), ವೀರಾರೆಡ್ಡಿ ಪಾಟೀಲ್ (ರಾಜ್ಯ ಮಂಡಳಿಯ ಆಹ್ವಾನಿತರು), ಬಾಬುರಾವ ಹೊನ್ನಾ (ರಾಜ್ಯ ಉಪಾಧ್ಯಕ್ಷರು), ಶಿವರಾಜ ಪಾಟೀಲ್ ಅತಿವಾಳ (ರೈತ ಮುಖಂಡರು), ಬಸವರಾಜ ಅಷ್ಟೂರ (ತಾಲೂಕಾ ಉಪಾಧ್ಯಕ್ಷರು), ನಜೀರ ಅಹ್ಮದ್ (ಜಿಲ್ಲಾಧ್ಯಕ್ಷರು), ಶಫಾಯತ್ ಅಲಿ, ನನ್ನೇಸಾಬ್ ಟಿ. ಮಿರ್ಜಾಪೂರ, ಭಾವುರಾವ ನೇಳವಾಡೆ (ರಾಜ್ಯ ಮಂಡಳಿಯ ಆಹ್ವಾನಿತರು), ಶಾಂತಮ್ಮಾ ಮೂಲಗೆ (ಅಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ), ವಿಠಲ್ ರಾವ, ವೀರಶೆಟ್ಟಿ, ಚಂದ್ರಕಾಂತ ಪಾಟೀಲ್, ವಿಜಯಕುಮಾರ ಬಾವಗಿ, ನಾಗಶೆಟ್ಟೆಪ್ಪಾ. ಎಂ.ಡಿ.ಸಮದ ಪಟೇಲ್ ,ಸೈಲೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಿಬಿಎ ಚುನಾವಣೆ: ಮೇ 8 ಆಯೋಗದ ಮಹತ್ವದ ಸಭೆ

**ಬೆಂಗಳೂರು, ಮೇ 6–** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಗೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆ ಕಂಡುಬಂದಿದೆ. ಚುನಾವಣೆಗೆ ದಿನಾಂಕ ನಿಗದಿ ಮಾಡುವ ಪ್ರಕ್ರಿಯೆ ಇದೀಗ ಅಂತಿಮ ಹಂತಕ್ಕೆ ತಲುಪಿದ್ದು, ರಾಜ್ಯ ಚುನಾವಣಾ ಆಯೋಗ ಮೇ 8ರಂದು ಪ್ರಮುಖ ಸಭೆ ಕರೆದಿದೆ.

ಜಿಬಿಎ ಕಾಯ್ದೆಯ ಪ್ರಕರಣ 34(4) ಅನ್ವಯ, ಪ್ರಾಧಿಕಾರದ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿ ಚುನಾವಣಾ ದಿನಾಂಕ ನಿಗದಿ ಪಡಿಸುವುದು ಅನಿವಾರ್ಯವಾಗಿದೆ. ಈ ಹಿನ್ನೆಲೆಯಲ್ಲಿ, ಮೇ 8ರಂದು ವಿಧಾನಸೌಧದಲ್ಲಿ ಜಿಬಿಎ ಎಲ್ಲಾ ಸದಸ್ಯರ ಸಭೆಯನ್ನು ಆಯೋಜಿಸಲಾಗಿದೆ.

ಈಗಾಗಲೇ ವಾರ್ಡ್ ವಿಂಗಡಣೆ, ಮೀಸಲಾತಿ ಹಾಗೂ ಅಂತಿಮ ಮತದಾರರ ಪಟ್ಟಿ ಸಿದ್ಧಗೊಂಡಿದ್ದು, ಚುನಾವಣೆಗೆ ಬೇಕಾದ ಪೂರ್ವ ಸಿದ್ಧತೆಗಳನ್ನು ಆಯೋಗ ಪೂರ್ಣಗೊಳಿಸಿದೆ. ಸಭೆಗೆ ಸಂಬಂಧಿಸಿದ ಮಾಹಿತಿ ಈಗಾಗಲೇ ಜಿಬಿಎ ಸದಸ್ಯರಿಗೆ ನೀಡಲಾಗಿದೆ.

ಒಟ್ಟು 86 ಸದಸ್ಯರನ್ನು ಒಳಗೊಂಡಿರುವ ಜಿಬಿಎ ಸಮಿತಿಯಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಜಿಬಿಎ ಮುಖ್ಯ ಆಯುಕ್ತರು, ಐದು ನಗರಪಾಲಿಕೆ ಆಯುಕ್ತರು, ಬೆಂಗಳೂರಿನ 28 ವಿಧಾನಸಭಾ ಕ್ಷೇತ್ರಗಳ ಶಾಸಕರು, ಲೋಕಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು ಹಾಗೂ ರಾಜ್ಯಸಭಾ ಸದಸ್ಯರು ಸೇರಿದಂತೆ ಇತರೆ ಅಧಿಕಾರಿಗಳು. ಶಾಸಕರು ಸೇರಿದ್ದಾರೆ.

ಸಭೆಯಲ್ಲಿ ಸದಸ್ಯರ ಸಲಹೆ ಮತ್ತು ಮನವಿಗಳನ್ನು ಸ್ವೀಕರಿಸಿದ ನಂತರ, ಚುನಾವಣಾ ದಿನಾಂಕವನ್ನು ಅಂತಿಮಗೊಳಿಸುವ ಸಾಧ್ಯತೆ ಇದೆ. ಜಿಬಿಎ ಚುನಾವಣೆಗೆ ಸಂಬಂಧಿಸಿದ ಮುಂದಿನ ದಿಕ್ಕು ಈ ಸಭೆಯಲ್ಲೇ ನಿರ್ಧಾರವಾಗುವ ನಿರೀಕ್ಷೆ ಇದೆ.ಇನ್ನೂ ಚುನಾವಣೆ ಅಯೋಗ ಈಗಾಗಲೇ ಜೂನ್ ತಿಂಗಳಲ್ಲಿ ಎರಡು ದಿನಾಂಕವನ್ನು ನಿಗಧಿ ಮಾಡಿದ್ದು. ಸಭೆಯಲ್ಲಿ ದಿನಾಂಕ ನಿಗಧಿ ಬಗ್ಗೆ ಮಾಹಿತಿ ಪಡೆಯಲ್ಲಿದೆ
ಒಟ್ಟಿನಲ್ಲಿ, ಮೇ 8ರಂದು ನಡೆಯಲಿರುವ ಈ ಸಭೆಯನ್ನು ಜಿಬಿಎ ಚುನಾವಣೆಯ




ದಿಕ್ಕು ತೋರಿಸುವ ಮಹತ್ವದ ಹೆಜ್ಜೆ ಎಂದು ಹೇಳಬಹುದು.
ಸಭೆಯಲ್ಲಿ ಚರ್ಚೆಯ ವಿಷಯ:

1. ವಾರ್ಡುವಾರು ಮತದಾನ ಕೇಂದ್ರದ ಪಟ್ಟಿಯನ್ನು ಆಯೋಗದ ಅನುಮೋದನೆ ಪಡೆದು ಪ್ರಚರ ಪಡಿಸಿರುವ ಪ್ರಸ್ತಾವನೆ ಬಗ್ಗೆ
2. ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳ ನೇಮಕಾತಿ ಅಧಿಸೂಚನೆ ಹೊರಡಿಸಿರುವ ಕುರಿತು.
3. ಮತಗಟ್ಟೆ ಸಿಬ್ಬಂದಿ ನೇಮಕ ಮಾಡುವ ಬಗ್ಗೆ
4. ಮತಗಟ್ಟೆ ಸಿಬ್ಬಂದಿಗಳ ತರಬೇತಿ ಬಗ್ಗೆ
5. ಮತಪೆಟ್ಟಿಗೆಗಳ ಎತ್ತುವಳಿ, ಸಾಗಾಣಿಕೆ, ಸಂಗ್ರಹಣೆ ಸಂಬಂಧ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿರುವ ಕುರಿತು.
6. ಮಸ್ಟರಿಂಗ್, ಡಿ–ಮಸ್ಟರಿಂಗ್ ಮತ್ತು ಮತ ಎಣಿಕೆ ಕೇಂದ್ರಗಳನ್ನು ಸ್ಥಾಪಿಸುವ ಕುರಿತು
7. ಭದ್ರತಾ ಕೊಠಡಿ (ಖಣಡಿಂಟಿರ ಖಂಂಟ) ವ್ಯವಸ್ಥೆ
8. ಸಾರ್ವಜನಿಕ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಹೋರ್ಡಿಂಗ್ ಹಾಕುವುದನ್ನು ನಿಷೇಧಿಸುವ ಕುರಿತು.
10. ಚುನಾವಣಾ ಪ್ರಚಾರಕ್ಕಾಗಿ ಸಭೆ ನಡೆಸಲು ರಾಜಕೀಯ ಪಕ್ಷಗಳಗೆ ಅನುಮತಿ ನೀಡುವ ಕುರಿತು.
11. ಸಾರ್ವಜನಿಕ ಆಸ್ತಿ–ಪಾಸ್ತಿ ವಿರೂಪಗೊಳಿಸದಿರುವ ಕುರಿತು.

ಜಿಬಿಎ ಚುನಾವಣೆಗೆ ದಿನಾಂಕ ಅದೇ ದಿನ ನಿಗದಿಯಾಗುವ ಸಾಧ್ಯತೆಯಿದೆ. ಈಗಾಗಲೇ ಸರ್ಕಾರಕ್ಕೆ 66 ಕೋಟಿ ಚುನಾವಣಾ ವೆಚ್ಚದ ಬಗ್ಗೆ ಮಾಹಿತಿ ನೀಡಲಾಗಿದೆ.ಸುಮಾರು 6 ಸಾವಿರ ಸಿಬ್ಬಂದಿಗಳು ಚುನಾವಣೆ ಕೆಲಸ ಕಾರ್ಯಕ್ಕೆ ನೇಮಿಸಲು ಸಿದ್ಧತೆ ನಡೆಸಿದ್ದರೆ.ಒಂದು ವೇಳೆ ಸಭೆಯಲ್ಲಿ ಚುನಾವಣೆಗೆ ಹಸಿರು ನಿಶಾನೆ ನೀಡಿದರೆ ಮೇ ಮೂರನೇ ವಾರ ಚುನಾವಣೆ ಅಯೋಗ ಜಿಬಿಎ ಚುನಾವಣೆಗೆ ದಿನಾಂಕ ನಿಗಧಿ ಮಾಡಿ ನೋಟಿಪಿಕೇಷನ್ ಹೊರಾಡಿಸಲಿದೆ ಎಂಬ ಮಾಹಿತಿ ಅಧಿಕಾರಿಗಳು ನೀಡಿದ್ದಾರೆ.

# ಜ್ಞಾನ ಕದಿಯಲಾಗದ ಬಹುದೊಡ್ಡ ಸಂಪತ್ತು



**ಸೈದಾಪುರ:ಮೇ.6:**ಹಣ, ಆಸ್ತಿ ಸಂಪತ್ತನ್ನು ಖರ್ಚು ಮಾಡಿ ಖಾಲಿ ಮಾಡಬಹುದು, ಇದಲ್ಲದೆ ಅದನ್ನು ಬೇರೆಯವರು ದೋಚಬಹುದು ಆದರೆ ಜ್ಞಾನವನ್ನುಯಾರಿಂದಲೂ ಕದಿಯಲು ಸಾಧ್ಯವಿಲ್ಲ ಎಂದು ಶಿಕ್ಷಕ ಬಸವರಾಜ ಚಂದ್ರಗಿರಿ ತಿಳಿಸಿದರು. ಸಮೀಪದ ಬಾಡಿಯಾಳ ಗ್ರಾಮದ ಗ್ರಾಪಂ ಅರಿವು ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರವನ್ನು ಉದ್ದೇಶಿಸಿ ಮಾತನಾಡಿದರು. ಮಕ್ಕಳ ಶೈಕ್ಷಣಿಕ ಬೆಳವಣಿಗೆ ಜತೆಗೆ ಅವರಿಗೆ ಸಂಸ್ಕಾರ ಬಹಳ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಪೋಷಕರು ಗಮನ ಹರಿಸಬೇಕು. ರಾಜ್ಯದ ಇತರ ಭಾಗಗಳಿಗೆ ಹೋಲಿಕೆ ಮಾಡಿದ್ದಲ್ಲಿ ನಮ್ಮ ಭಾಗದಲ್ಲಿ ಬಿಸಿಲಿನ ಪ್ರಮಾಣ ಅತ್ಯಧಿಕವಾಗಿದೆ. ಇದರಿಂದ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀಳುವ ಸಾಧ್ಯತೆಯಿದ್ದು ಪೋಷಕರು ಜಾಗೃತಿ ವಹಿಸುವುದು ಅವಶ್ಯವಿದೆ. ತೀರಾ ಅನಿವಾರ್ಯ ಕಾರಣಗಳನ್ನು ಹೊರತುಪಡಿಸಿ ಮಕ್ಕಳನ್ನು ಹೊರಗಡೆ ಬಿಡಬಾರದು. ಸರಕಾರ ಬೇಸಿಗೆ ಶಿಬಿರವನ್ನು ಆಯೋಜನೆ ಮಾಡುವ ಮೂಲಕ ಮಕ್ಕಳಿಗೆ ಶಿಕ್ಷಣ ನೀಡಲಾಗುತ್ತದೆ. ಹೀಗಾಗಿ ಪ್ರತಿಯೊಬ್ಬರು ಇದರ ಸದುಪಯೋಗ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.ಇದಕ್ಕೂ ಮುನ್ನ ಗ್ರಂಥಾಲಯದ ಪಿತಾಮಹ ಡಾ. ಎಸ್ ಆರ್ ರಂಗನಾಥರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಶಿಬಿರದ ಕಾರ್ಯಕ್ರಮದಲ್ಲಿ ಮಕ್ಕಳಿಗೆ ತಮ್ಮನ್ನು ತಾವು ಸ್ವಯಂ ಪರಿಚಯಿಸಿಕೊಳ್ಳುವ ಬಾಲ್ ಪಾಸಿಂಗ್ ಗೇಮ್ ಆಡಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಲಿಂಗಣ್ಣಗೌಡ ಪೊಲೀಸ್ ಪಾಟೀಲ್ ವಹಿಸಿಕೊಂಡಿದ್ದರು. ಗ್ರಾಪಂ ಕಾರ್ಯದರ್ಶಿ ಅಬ್ದುಲ್ ಬಾಷಾ, ಕಲಿಕಾ ಪ್ರೇರಕರಾದ ವೇಕಟೇಶ ಕಾವಲಿ, ಗ್ರಾಪಂ ಕರವಸೂಲಿಗಾರ ಮರೆಪ್ಪ ಮಕ್ತಲ್ ಆಗಮಿಸಿದ್ದರು. ಶ್ರೀ ವೆಂಕಟೇಶ್ ಕಾವಲಿ ನಿರೂಪಿಸಿದರು ಶ್ರೀ ಮರೆಪ್ಪ ಮಕ್ತಾಲ್ ಅವರು ವಂದಿಸಿದರು.

# ಯಾದಗಿರಿ: ಮೇ 9ರಂದು ಬಿಎಸ್‌ವೈ 50 ವರ್ಷದ ಸಾರ್ಥಕ ಸೇವೆಗೆ ಅಭಿಮಾನೋತ್ಸವ : ಗಿರಿಜಿಲ್ಲೆಯಿಂದ 5 ಸಾವಿರ ಕಾರ್ಯಕರ್ತರು



**ಯಾದಗಿರಿ:ಮೇ.6:** ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ರಾಜಕೀಯ ಜೀವನದ 50 ವರ್ಷದ ಸಾರ್ಥಕ ಸೇವೆಯನ್ನು ಆಚರಿಸುವ ಮಹತ್ವದ ಕಾರ್ಯಕ್ರಮ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿದ್ದು, ಯಾದಗಿರಿ ಜಿಲ್ಲೆಯಿಂದ ಭಾರಿ ಸಂಖ್ಯೆಯಲ್ಲಿ ಬಿಜೆಪಿ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ.

ಮಂಗಳವಾರ ಯಾದಗಿರಿಯ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ ಮಾತನಾಡಿ, "ಗಿರಿಜಿಲ್ಲೆಯಿಂದ ಸುಮಾರು ಐದು ಸಾವಿರ ಕಾರ್ಯಕರ್ತರು, ಮುಖಂಡರು ಮತ್ತು ಪದಾಧಿಕಾರಿಗಳು ಈ ಕಾರ್ಯಕ್ರಮಕ್ಕೆ ತೆರಳಲಿದ್ದಾರೆ" ಎಂದು ತಿಳಿಸಿದರು.

ಯಡಿಯೂರಪ್ಪ ಅವರ ಕೊಡುಗೆ ಯಾದಗಿರಿ ಜಿಲ್ಲೆಯ ಅಭಿವೃದ್ಧಿಗೆ ಅಪಾರವಾಗಿದೆ. ಜಿಲ್ಲೆ ಘೋಷಣೆಯಾಗಲು ಅವರ ಪಾತ್ರ ಮಹತ್ವದ್ದಾಗಿದೆ. ಈ ಹಿನ್ನೆಲೆ ಚಿತ್ರದುರ್ಗದ ಸಮಾರಂಭದಲ್ಲಿ ಯಾದಗಿರಿ ಜಿಲ್ಲಾ ಬಿಜೆಪಿ ವತಿಯಿಂದ ವಿಶೇಷ ಸನ್ಮಾನ ನೆರವೇರಿಸಲಾಗುತ್ತದೆ ಎಂದು ಹೇಳಿದರು.
ಕಾರ್ಯಕ್ರಮದಲ್ಲಿ ವೀರಶೈವ ಧರ್ಮದ ಪಂಚಪೀಠಗಳ ಜಗದ್ಗುರುಗಳು, ವಿವಿಧ ಮಠಗಳ ಶ್ರೀಗಳು ಹಾಗೂ ವಿವಿಧ ಸಮುದಾಯಗಳ ಗುರುಗಳು ಭಾಗವಹಿಸಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಾಜಿ ಸಚಿವ ಹಾಗೂ ಹಾಲಿ ಸಂಸದ ಗೋವಿಂದ ಕಾರಜೋಳ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯಕಾರಿ ಸದಸ್ಯ ಮಹೇಶರೆಡ್ಡಿ ಮುದ್ನಾಳ, ಮುಖಂಡರಾದ ರಾಚಣ್ಣಗೌಡ ಮುದ್ನಾಳ, ನಾಗರತ್ನ ಕುಪ್ಪಿ, ದೇವೇಂದ್ರನಾಥ ನಾದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರಶುರಾಮ ಕುರಕುಂದಿ, ಜಿಲ್ಲಾ ವಕ್ತಾರ ಹಣಮಂತ ಇಟಗಿ, ವೆಂಕಟರೆಡ್ಡಿ ಅಬ್ಬೆತುಮಕೂರು, ಜಿಲ್ಲಾ ಮಾಧ್ಯಮ ಸಂಚಾಲಕ ವಿರುಪಾಕ್ಷಯ್ಯ ಸ್ವಾಮಿ ಹೆಡಗಿಮದ್ರಾ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಟ್ರಾನ್ಸ್‌ಜೆಂಡರ್ ಮಸೂದೆ ಹಿಂಪಡೆಯಲು ಆಗ್ರಹ :ಯಾದಗಿರಿಯಲ್ಲಿ ಮೌನ ಪ್ರತಿಭಟನೆ




**ಯಾದಗಿರಿ:ಮೇ.6:**ಟ್ರಾನ್ಸ್‌ಜೆಂಡರ್ ವ್ಯಕ್ತಿಗಳ ಕುರಿತು ಕೇಂದ್ರ ಸರ್ಕಾರ ಪ್ರಸ್ತಾಪಿಸಿರುವ ತಿದ್ದುಪಡಿ ಮಸೂದೆಗೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಸಿಎನ್‌ಓ –ಜಿಎಂಆರ್ ಕೋಯಿಲೇಷನ್ ಹಾಗೂ ಸಾರಥ್ಯ ಕರ್ನಾಟಕ ರಾಜ್ಯಮಟ್ಟದ ಸಮುದಾಯ ಸಂಘಟನೆಯ ಪದಾಧಿಕಾರಿಗಳು, ಮಸೂದೆಯನ್ನು ತಕ್ಷಣವೇ ಹಿಂಪಡೆಯುವಂತೆ ಆಗ್ರಹಿಸಿದರು.

ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ರಾಜ್ಯ ಮುಖಂಡ ಕೃಷಿರಾಜ್ ಮಾತನಾಡಿ, "ಟ್ರಾನ್ಸ್‌ಜೆಂಡರ್ ಎಂಬ ಪದಕ್ಕೆ ಸೀಮಿತ ಮತ್ತು ತಪ್ಪಾದ ವ್ಯಾಖ್ಯಾನ ನೀಡಲಾಗಿದ್ದು, ಹಲವು ಲಿಂಗ ವೈವಿಧ್ಯತೆ ಗುರುತುಗಳನ್ನು ಹೊರತುಪಡಿಸಲಾಗಿದೆ. ವೈದ್ಯಕೀಯ ಪ್ರಮಾಣಪತ್ರವನ್ನು ಕಡ್ಡಾಯಗೊಳಿಸುವ ಮೂಲಕ ಮಾನವ ಹಕ್ಕುಗಳ ಉಲ್ಲಂಘನೆ ಆಗುತ್ತಿದೆ" ಎಂದು ದೂರಿದರು.

ಸಂವಿಧಾನದ ವಿಧಿಗಳು 14, 19 ಮತ್ತು 21 ಉಲ್ಲಂಘನೆಯ ಸಾಧ್ಯತೆಗಳಿದ್ದು, ಲಿಂಗ ಗುರುತಿನ ಸ್ವಯಂ ನಿರ್ಧಾರ ಹಕ್ಕಿಗೆ ಧಕ್ಕೆ ಉಂಟಾಗುತ್ತಿದೆ. ಸಮುದಾಯದ ಮೇಲೆ ಅನಗತ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣ ಹೇರುವ ಪ್ರಯತ್ನ ಖಂಡನೀಯ ಎಂದು ಹೇಳಿದರು. ನೀತಿ ರೂಪಿಸುವ ಪ್ರತಿಯೊಂದು ಹಂತದಲ್ಲೂ ಟ್ರಾನ್ಸ್‌ಜೆಂಡರ್ ಸಮುದಾಯದೊಂದಿಗೆ ಸಮಾಲೋಚನೆ ನಡೆಸಬೇಕು ಮತ್ತು ಕಾನೂನುಗಳು ಸಂವಿಧಾನ ಹಾಗೂ ಅಂತರರಾಷ್ಟ್ರೀಯ ಮಾನವ ಹಕ್ಕು ಮಾನದಂಡಗಳಿಗೆ ಅನುಗುಣವಾಗಿರಬೇಕು ಎಂದು ಆಗ್ರಹಿಸಿದರು.

ಇದಲ್ಲದೆ, ಸಾರ್ವಜನಿಕ ಸ್ಥಳಗಳಲ್ಲಿ ಬಿಕ್ಷಾಟನೆ ಮಾಡಬಾರದೆಂದು ಜಿಲ್ಲಾಡಳಿತ ಹೊರಡಿಸಿರುವ ಆದೇಶವನ್ನೂ ಹಿಂಪಡೆಯುವಂತೆ ಒತ್ತಾಯಿಸಿದರು. "ನಮಗೆ ಶಿಕ್ಷಣವಿದೆ, ಅವಕಾಶಗಳಿಲ್ಲ. ನಮ್ಮ ಅರ್ಹತೆಗೆ ತಕ್ಕ ಉದ್ಯೋಗ ಒದಗಿಸಿದರೆ ನಾವು ಯಾಕೆ ಬಿಕ್ಷೆ ಬೇಡಬೇಕು?" ಎಂದು ಆಶಾಕಿರಣ ಸಾಮಾಜಿಕ ಸೇವಾ ಸಂಸ್ಥೆಯ ಪದಾಧಿಕಾರಿಗಳು ಪ್ರಶ್ನಿಸಿದರು.

ಸುದ್ದಿಗೋಷ್ಠಿಯ ಬಳಿಕ ನೇತಾಜಿ ವೃತ್ತದಲ್ಲಿ ಮೌನ ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಎಡಿಸಿ ರಮೇಶ್ ಕೋಲಾರ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಸಾರಥ್ಯ ಸಂಘಟನೆಯ ಪದಾಧಿಕಾರಿಗಳಾದ ಚಾಂದಿನಿ, ತ್ರಿಮೂರ್ತಿ, ಆಶಾಕಿರಣ ಸಂಸ್ಥೆಯ ಮಾಯಾ ನಾಯಕ, ಪ್ರಿಯಾಂಕಾ, ಅಂಕಿತಾ, ಮಂಜುಳಾ, ಪುಂಡಲಿಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೋಟಗೇರಾ ಗ್ರಾಮದ ಗೋಮಾಳ ಭೂಮಿ ಕಬಳಿಕೆ: ಎಫ್‌ಐಆರ್ ಬಳಿಕವೂ ಅಧಿಕಾರಿಗಳ ನಿರ್ಲಕ್ಷ್ಯ



**ಯಾದಗಿರಿ :ಮೇ.6:**ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಕೋಟಗೇರಾ ಗ್ರಾಮದಲ್ಲಿ ಸರ್ಕಾರಿ ಗೋಮಾಳ ಭೂಮಿಯ ಅಕ್ರಮ ಕಬಳಿಕೆ ಪ್ರಕರಣ ಮತ್ತೆ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಸರ್ವೆ ನಂ. 86ರಲ್ಲಿ ಒಳಗೊಂಡಿರುವ ಸುಮಾರು 87 ಎಕರೆ 20 ಗುಂಟೆಗಳ ಗೋಮಾಳ ಜಾಗವನ್ನು ಅಕ್ರಮವಾಗಿ ಬಳಸಿಕೊಂಡಿರುವ ಆರೋಪದ ಹಿನ್ನೆಲೆ 67 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದ್ದರೂ, ಇದುವರೆಗೂ ಯಾವುದೇ ಕಠಿಣ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಈ ಪ್ರಕರಣವನ್ನು ನಿರಂತರವಾಗಿ ಬೆಳಕಿಗೆ ತಂದ 'ಸಂಜೆವಾಣಿ' ಪತ್ರಿಕೆಯ ವರದಿಗಳ ಪರಿಣಾಮವಾಗಿ 67 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಜಿಲ್ಲೆಯ ಮಟ್ಟದಲ್ಲಿ ಅಪರೂಪದ ಬೆಳವಣಿಗೆಯಾಗಿ ಗಮನ ಸೆಳೆದಿತ್ತು. ಸಾರ್ವಜನಿಕ ಆಸ್ತಿಯ ಸಂರಕ್ಷಣೆಗೆ ಮಾಧ್ಯಮದ ಹೋರಾಟಕ್ಕೆ ಇದು ಮಹತ್ವದ ಸಾಧನೆ ಎಂದು ಅರ್ಜಿದಾರ ಚಂದ್ರಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ

ಆದರೆ, ಎಫ್‌ಐಆರ್ ದಾಖಲಾಗಿದ ನಂತರವೂ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ಭೂಮಿಯನ್ನು ತೆರವುಗೊಳಿಸುವ ಕಾರ್ಯ ಆರಂಭವಾಗದೇ ಇರುವುದರಿಂದ ಗ್ರಾಮಸ್ಥರ ಆಕ್ರೋಶ ಮತ್ತಷ್ಟು ತೀವ್ರಗೊಂಡಿದೆ. "ಸರ್ಕಾರಿ ಗೋಮಾಳ ಜಾಗವನ್ನು ರಕ್ಷಿಸುವುದು ಆಡಳಿತದ ಜವಾಬ್ದಾರಿ. ಎಫ್‌ಐಆರ್ ದಾಖಲಿಸುವುದರಲ್ಲೇ ಕೆಲಸ ಮುಗಿಯುವುದಿಲ್ಲ. ಅಕ್ರಮ ಕಬಳಿಕೆ ತೆರವುಗೊಳಿಸಿ ಭೂಮಿಯನ್ನು ಮೂಲ ಸ್ಥಿತಿಗೆ ತರಬೇಕು" ಎಂದು ಸ್ಥಳೀಯ ನಿವಾಸಿ ಶರಣಪ್ಪ ಗುತ್ತೇದಾರ ಒತ್ತಾಯಿಸಿದ್ದಾರೆ.

ಪ್ರಕರಣದ ವಿಚಾರದಲ್ಲಿ ಅಧಿಕಾರಿಗಳ ನಡುವಿನ ಹೊಣೆತಪ್ಪಿಸುವ ಧೋರಣೆ ಸ್ಪಷ್ಟವಾಗುತ್ತಿದೆ. ಗುರುಮಠಕಲ್ ಸಿಪಿಐ ವೀರಣ್ಣ ದೊಡ್ಡಮನಿ ಅವರನ್ನು ಸಂಪರ್ಕಿಸಿದಾಗ, "ಸ್ಥಳಕ್ಕೆ ಕಂದಾಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರವೇ ನಾನು ತೆರಳುತ್ತೇನೆ" ಎಂದು ತಿಳಿಸಿದ್ದಾರೆ. ಮತ್ತೊಂದೆಡೆ ಕಂದಾಯ ನಿರೀಕ್ಷಕರನ್ನು ಸಂಪರ್ಕಿಸಲು ಪ್ರಯತ್ನಿಸಿದಾಗ, ಸ್ಥಳೀಯರ ಕರೆಗಳಿಗೆ ಪ್ರತಿಕ್ರಿಯೆ ಸಿಗುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ತಹಶೀಲ್ದಾರ್ ಅವರ ಗಮನಕ್ಕೂ ವಿಷಯ ತಲುಪಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇನ್ನೂ ವಿಪರ್ಯಾಸವೆಂದರೆ, ಮಾಧ್ಯಮಗಳಲ್ಲಿ ನಿರಂತರವಾಗಿ ಸುದ್ದಿಗಳು ಪ್ರಕಟವಾಗುತ್ತಿದ್ದರೂ ಮತ್ತು 67 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದ್ದರೂ ಅಕ್ರಮ ಸಾಗುವಳಿ ಮುಂದುವರಿದಿದೆ. ಸ್ಥಳೀಯರು ಹೇಳುವಂತೆ, ಆರೋಪಿಗಳು ಯಾವುದೇ ಭಯವಿಲ್ಲದೆ ಮತ್ತೆ ಭೂಮಿಯಲ್ಲಿ ಕೃಷಿ ಚಟುವಟಿಕೆ ನಡೆಸುತ್ತಿದ್ದಾರೆ. "ಎಫ್‌ಐಆರ್ ಆದರೂ ಕ್ರಮ ಕೈಗೊಳ್ಳದಿರುವುದು ಆಶ್ಚರ್ಯಕರ. ಪ್ರಭಾವಿ ವ್ಯಕ್ತಿಗಳ ಬೆಂಬಲದಿಂದಲೇ ಅವರು ನಿರ್ಬಂಧವಿಲ್ಲದೆ ಅಕ್ರಮ ಸಾಗುವಳಿ ಮುಂದುವರಿಸುತ್ತಿದ್ದಾರೆ" ಎಂದು ಚಂದ್ರಯ್ಯ ಗುತ್ತೇದಾರ್ ಆರೋಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ತಕ್ಷಣವೇ ಅಕ್ರಮ ತೆರವು ಕಾರ್ಯಾಚರಣೆ ಕೈಗೊಂಡು, 87 ಎಕರೆ ಗೋಮಾಳ ಭೂಮಿಯನ್ನು ಸಂಪೂರ್ಣವಾಗಿ ಸಂರಕ್ಷಿಸುವಂತೆ ಜಿಲ್ಲಾಡಳಿತಕ್ಕೆ ಆಗ್ರಹಿಸಿದ್ದಾರೆ.

# ರಾಷ್ಟ್ರೀಯ ಚಿಂತನೆಗೆ ಐತಿಹಾಸಿಕ ಜಯ: ರಾಚನಗೌಡ ಮುದ್ನಾಳ




**ಯಾದಗಿರಿ:ಮೇ.6:** ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣಾ ಫಲಿತಾಂಶಗಳು ದೇಶದ ರಾಜಕೀಯ ದಿಕ್ಕಿನಲ್ಲಿ ಮಹತ್ವದ ತಿರುವು ತಂದಿದ್ದು, ರಾಷ್ಟ್ರೀಯ ಚಿಂತನೆಗೆ ಜನತೆ ಸ್ಪಷ್ಟ ಬೆಂಬಲ ಸೂಚಿಸಿದ್ದಾರೆ ಎಂದು ಯಾದಗಿರಿಯ ಹಿರಿಯ ಬಿಜೆಪಿ ಮುಖಂಡ ರಾಚನಗೌಡ ಮುದ್ನಾಳ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಭರ್ಜರಿ ಸಾಧನೆ ಮಾಡಿದ್ದು, ಇದು ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿ ದೃಷ್ಟಿಕೋನಕ್ಕೆ ಜನರು ನೀಡಿದ ಮನ್ನಣೆ ಎಂದು ತಿಳಿಸಿದ್ದಾರೆ. ಅಸ್ಸಾಂನಲ್ಲಿ ಪಕ್ಷವು ಸತತವಾಗಿ ಮತ್ತೊಮ್ಮೆ ಅಧಿಕಾರದ ಗಡಿಯನ್ನು ಮುಟ್ಟಿರುವುದು ಸ್ಥಿರ ಆಡಳಿತದ ಮೇಲೆ ಜನರ ವಿಶ್ವಾಸವನ್ನು ತೋರಿಸುತ್ತದೆ ಎಂದು ಹೇಳಿದರು.

ಪುದುಚೇರಿಯುಲ್ಲೂ ಎನ್‌ಡಿಎ ಮೈತ್ರಿಕೂಟ ಸ್ಪಷ್ಟ ಬಹುಮತದೊಂದಿಗೆ ಜಯ ಸಾಧಿಸಿರುವುದು ದೇಶದಲ್ಲಿ ಬದಲಾವಣೆಯ ರಾಜಕೀಯ ವಾತಾವರಣವನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ವಿಶ್ಲೇಷಿಸಿದರು.
ತುಷ್ಟೀಕರಣ ಮತ್ತು ವಂಶಪಾರಂಪರ್ಯ ರಾಜಕಾರಣವನ್ನು ಮತದಾರರು ತಳ್ಳಿಹಾಕಿದ್ದು, ಪ್ರಜಾಪ್ರಭುತ್ವದಲ್ಲಿ ಜನರ ತೀರ್ಮಾನವೇ ಅಂತಿಮ ಎಂಬುದು ಈ ಫಲಿತಾಂಶಗಳಿಂದ ಸಾಬೀತಾಗಿದೆ ಎಂದು ಹೇಳಿದರು. ಈ ಭರ್ಜರಿ ಯಶಸ್ಸಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ನಾಯಕತ್ವವನ್ನು ಅವರು ಪ್ರಶಂಸಿಸಿದ್ದಾರೆ.
ಈ ವಿಜಯದ ಸಂಭ್ರಮವು ಯಾದಗಿರಿ ಜಿಲ್ಲೆಯ ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಚೈತನ್ಯವನ್ನು ತುಂಬಿದ್ದು, ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆಯನ್ನು ಇನ್ನಷ್ಟು ಬಲಪಡಿಸಲು ಇದು ನೆರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿಲ್ಲನಕೇರಾ ಗ್ರಾಮದಲ್ಲಿ ವಿಶ್ವ ಕೈ ಸ್ವಚ್ಛತೆ ದಿನಾಚರಣೆ: ಆರೋಗ್ಯ ಜಾಗೃತಿ ಕಾರ್ಯಕ್ರಮ ಯಶಸ್ವಿ

**ಯಾದಗಿರಿ:ಮೇ.6:**ಜಿಲ್ಲೆಯ ಕಿಲ್ಲನಕೇರಾ ಗ್ರಾಮದಲ್ಲಿ ವಿಶ್ವ ಕೈ ಸ್ವಚ್ಛತೆ ದಿನದ ಅಂಗವಾಗಿ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ನಡೆಸಲಾಯಿತು. ಗ್ರಾಮದಲ್ಲಿನ ಚರ್ಚ್ ಆವರಣದಲ್ಲಿ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಸ್ಥಳೀಯರಿಗೆ ಕೈ ಸ್ವಚ್ಛತೆಯ ಮಹತ್ವವನ್ನು ವಿವರಿಸಲಾಯಿತು.



ಡಾನ್ ಬೋಸ್ಕೊ ಸಮಾಜ ಸೇವಾ ಕೇಂದ್ರದ ನಿರ್ದೇಶಕ ಫಾದರ್ ಶಾಬು ಫ್ರಾನ್ಸಿಸ್ ಅವರ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮೊಬೈಲ್ ಕ್ಲಿನಿಕ್ ತಂಡದ ನರ್ಸಿಂಗ್ ಅಧಿಕಾರಿ ಸಿದ್ದಮ್ಮ, ಆರೋಗ್ಯ ಕಾರ್ಯಕರ್ತರಾದ ಮರೆಮ್ಮ ಮತ್ತು ಬಸವರಾಜ್ ಪ್ರಮುಖವಾಗಿ ಭಾಗವಹಿಸಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ 24 ಮಂದಿ ಗ್ರಾಮಸ್ಥರಿಗೆ ಕೈ ಸ್ವಚ್ಛತೆಯ ಅಗತ್ಯತೆ, ಅದರ ಆರೋಗ್ಯದ ಮೇಲೆ ಬೀರುವ ಪ್ರಭಾವ ಮತ್ತು ಸೋಂಕು ರೋಗಗಳ ತಡೆಗಟ್ಟುವಿಕೆಯಲ್ಲಿ ಅದರ ಪಾತ್ರ ಕುರಿತು ವಿವರಿಸಲಾಯಿತು. ಅತಿಸಾರ, ಕಾಲರಾ, ಟೈಫಾಯ್ಡ್ ಸೇರಿದಂತೆ ಹಲವು ರೋಗಗಳನ್ನು ಸರಿಯಾದ ಕೈ ತೊಳೆಯುವ ಅಭ್ಯಾಸದಿಂದ ತಪ್ಪಿಸಿಕೊಳ್ಳಬಹುದು ಎಂದು ಆರೋಗ್ಯ ಸಿಬ್ಬಂದಿ ತಿಳಿಸಿದರು. ಇದೇ ವೇಳೆ ವಿಶ್ವ ಆರೋಗ್ಯ ಸಂಸ್ಥೆ ಸೂಚಿಸಿರುವ ಕೈ ತೊಳೆಯುವ ಸರಿಯಾದ ವಿಧಾನವನ್ನು ಪ್ರದರ್ಶಿಸಿ, ಕನಿಷ್ಠ 20 ಸೆಕೆಂಡುಗಳ ಕಾಲ ಸಾಬೂನು ಬಳಸಿ ಕೈಗಳನ್ನು ಸ್ವಚ್ಛಗೊಳಿಸ ುವುದು ಅತ್ಯಾವಶ್ಯಕ ಎಂದು ತಿಳಿಸಿದರು. ದಿನನಿತ್ಯದ ಜೀವನದಲ್ಲಿ ಈ ಅಭ್ಯಾಸವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂಬ ಸಂದೇಶ ನೀಡಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ "ಸ್ವಚ್ಛ ಕೈಗಳು ಆರೋಗ್ಯಕರ ಜೀವನ" ಎಂಬ ಘೋಷಣೆಯೊಂದಿಗೆ ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸಲಾಯಿತು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE